ವಿಜಯಪುರ | ಸಂಪುಟ 04 | ಸಂಚಿಕೆ 145 ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com
RNI NO: KARKAN/2023/86203
ಗುರುವಾರ, ಜುಲೈ, 30, 2026



"ವಿಜಯಪುರ ಏರ್ಪೋರ್ಟ್ಗೆ ಅಗತ್ಯ ಅನುಮತಿ ಸಿಗಲು ದಾರಿ ಸುಗಮವಾಗಿದೆ. ನಾಗರಿಕ ವಿಮಾನಯಾನ ಮಹಾನಿರ್ದೇಶಕರು ಆಗಿರುವ ಕೆಲಸಗಳನ್ನು ಪರಿಶೀಲಿಸಲಿದ್ದಾರೆ. ವಿಮಾನ ನಿಲ್ದಾಣ ಕಾರ್ಯಾರಂಭಕ್ಕೆ ದಾರಿ ಸುಗಮವಾಗಲಿದೆ."

■ ಎಂ.ಬಿ.ಪಾಟೀಲ
ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು

### ವಿಜಯಪುರದಲ್ಲಿ ಅಕ್ಕನ ವಿವಿಯ ದಶಮಾನೋತ್ಸವ ಕಟ್ಟಡ ಸಂಸ್ಥಾಪನಾ ದಿನಾಚರಣೆ | ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅಭಿಮತ

# ಶಿಕ್ಷಣ & ಸಂಶೋಧನೆ ಕ್ಷೇತ್ರದಲ್ಲಿ ಕರ್ನಾಟಕ ಕೊಡುಗೆ ಅಪಾರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ದೇಶದ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಹಿಳೆಯರು ಶಿಕ್ಷಣವಂತರಾಗುವುದರ ಜೊತೆಗೆ ವಿವಿಧ ಕೌಶಲ್ಯಗಳನ್ನು ಕರಗತ ಮಾಡಿಕೊಳ್ಳಬೇಕು ಎಂದು ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಎಸ್. ಹೊರಟ್ಟಿ ಅವರು ಹೇಳಿದರು.

ನಗರದ ಹೊರವಲಯದಲ್ಲಿರುವ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ನೂತನವಾಗಿ ನಿರ್ಮಿಸಲಾದ ದಶಮಾನೋತ್ಸವ ಕಟ್ಟಡದ ಉದ್ಘಾಟನೆ ಹಾಗೂ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಮನಸ್ಸು ಮಾಡಿದರೆ ಯಾವುದೇ ಕ್ಷೇತ್ರದಲ್ಲೂ ಸಾಧನೆ ಮಾಡಲು ಸಾಧ್ಯ. ಹಾಗಾಗಿ ವಿದ್ಯಾರ್ಥಿನಿಯರು ಕಲಿಕೆಯಲ್ಲಿ ಹೊಸ ಆವಿಷ್ಕಾರ ಮಾಡಬೇಕು ಎಂದರು. ಬಸವಣ್ಣ ಹಾಗೂ ಅಕ್ಕಮಹಾದೇವಿಯವರ ವಚನಗಳನ್ನು ವಿದ್ಯಾರ್ಥಿನಿಯರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಉತ್ತಮ ಜ್ಞಾನ, ಶಿಕ್ಷಣ ಹಾಗೂ ಆತ್ಮವಿಶ್ವಾಸದಿಂದ ಜೀವನದಲ್ಲಿ ಉನ್ನತ ಸ್ಥಾನಕ್ಕೇರಬಹುದಾಗಿದೆ ಎಂದು ತಿಳಿಸಿದರು.

ಭಾರತದ ಮೊದಲ ವಿಜ್ಞಾನ ಅಕಾಡೆಮಿಯನ್ನು ಕರ್ನಾಟಕದಲ್ಲಿ ಆರಂಭಿಸಲಾಗಿದ್ದು, ಅದರ ಉದ್ಘಾಟನೆಯನ್ನು ಅಂದಿನ ರಾಷ್ಟ್ರಪತಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ನೆರವೇರಿಸಿದ್ದನ್ನು ಮೆಲುಕು ಹಾಕಿದ ಹೊರಟ್ಟಿ ಅವರು, ಶಿಕ್ಷಣ ಮತ್ತು ಸಂಶೋಧನೆಯ ಕ್ಷೇತ್ರದಲ್ಲಿ ಕರ್ನಾಟಕ ರಾಜ್ಯದ ಕೊಡುಗೆ ಮಹತ್ತರವಾಗಿದೆ ಎಂದು ಹೇಳಿದರು.

ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ತಮ್ಮ ಶಿಕ್ಷಣ ಸಂಸ್ಥೆಗಳಲ್ಲಿ ಶೇ.100ರಷ್ಟು ಮಹಿಳಾ ಪ್ರಾಧ್ಯಾಪಕರು ಕಾರ್ಯನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದ ಅವರು, ರಾಜ್ಯದ ಅನೇಕ ಅನುದಾನರಹಿತ ಶಾಲೆಗಳಿಗೆ ಅನುದಾನ ದೊರಕಿಸುವಲ್ಲಿ ಬಸವರಾಜ ಎಸ್. ಹೊರಟ್ಟಿ ಅವರ ಕೊಡುಗೆ ಮಹತ್ವದ್ದಾಗಿದೆ ಎಂದು ಶ್ಲಾಘಿಸಿದರು. ವಿದ್ಯಾರ್ಥಿನಿಯರು ಉತ್ತಮ ಶಿಕ್ಷಣ ಪಡೆದು ಭವಿಷ್ಯದಲ್ಲಿ ಉನ್ನತ ಅಧಿಕಾರಿಗಳಾಗಬೇಕು ಎಂದು ಕಿವಿಮಾತು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ಎಸ್.ವಿ. ಹಲಸೆ ಮಾತನಾಡಿ, ಐತಿಹಾಸಿಕ ವಿಜಯಪುರದಲ್ಲಿ



ಸ್ಥಾಪನೆಯಾಗಿರುವ ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯವು ಉತ್ತರ ಕರ್ನಾಟಕದ ಮಹಿಳಾ ವಿದ್ಯಾರ್ಥಿನಿಯರಿಗೆ ಉನ್ನತ ಶಿಕ್ಷಣದ ಉತ್ತಮ ವೇದಿಕೆ ಹಾಗೂ ಹೆಬ್ಬಾಗಿಲಿನಂತಾಗಿದೆ ಎಂದರು.

ಉತ್ತರ ಕರ್ನಾಟಕದ ಮಹಿಳಾ ವಿದ್ಯಾರ್ಥಿನಿಯರು ವಿವಿಧ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಶಿಕ್ಷಣದೊಂದಿಗೆ ಕೌಶಲ್ಯಾಭಿವೃದ್ಧಿಗೂ ಹೆಚ್ಚಿನ ಆದ್ಯತೆ ನೀಡಬೇಕು. ಕೌಶಲ್ಯಾಧಾರಿತ ಶಿಕ್ಷಣವೇ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಯಶಸ್ಸಿನ ಮೂಲಮಂತ್ರವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ವಿಶ್ವವಿದ್ಯಾನಿಲಯದ ಸ್ಥಾಪನೆಯಿಂದ ಇಲ್ಲಿಯವರೆಗೆ ಸಾಧಿಸಿರುವ ಶೈಕ್ಷಣಿಕ ಪ್ರಗತಿ, ಮೂಲಸೌಕರ್ಯಗಳ ಅಭಿವೃದ್ಧಿ ಹಾಗೂ ವಿದ್ಯಾರ್ಥಿನಿಯರ ಶೈಕ್ಷಣಿಕ ಸಬಲೀಕರಣಕ್ಕಾಗಿ ಕೈಗೊಂಡಿರುವ ವಿವಿಧ ಕಾರ್ಯಕ್ರಮಗಳ ಕುರಿತು ವಿವರಿಸಿದರು. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಹನುಮಂತ ನಿರಾಣಿ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ಬಿ. ಎಲ್. ಲಕ್ಕಣ್ಣವರ, ಕುಲಸಚಿವರಾದ ಶಂಕರಗೌಡ ಡಿ. ಸೋಮನಾಳ ಹಾಗೂ ಆರ್ಥಿಕ ಅಧಿಕಾರಿಗಳಾದ ರಾಮಣ್ಣಗೌಡ ಅಥಣಿ ಸೇರಿದಂತೆ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.


"ದೇಶದಲ್ಲಿ ಮಹಿಳೆಯರಿಗೆ ಸಮಾನ ಅವಕಾಶಗಳು ಲಭ್ಯವಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಂಡು ಸಮಾಜದ ಅಭಿವೃದ್ಧಿಯಲ್ಲಿ ತಮ್ಮದೇ ಆದ ಕೊಡುಗೆ ನೀಡಬೇಕು."

■ ಬಸನಗೌಡ ಪಾಟೀಲ ಯತ್ನಾಳ
ವಿಜಯಪುರ ಶಾಸಕರು



ಮಹಿಳೆಯರು ಅಡುಗೆ ಮನೆಗೆ ಮಾತ್ರ ಸೀಮಿತರಲ್ಲ. ನ್ಯಾಯಾಂಗ, ಪೊಲೀಸ್, ವೈದ್ಯಕೀಯ, ಶಿಕ್ಷಣ, ಆಡಳಿತ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ಮಹಿಳೆಯರಿದ್ದಾರೆ. ಅವರಿಗೆ ಎಲ್ಲೆಡೆ ಉತ್ತಮ ಅವಕಾಶಗಳಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಂಡು ಸಾಧನೆಯತ್ತ ಹೆಜ್ಜೆ ಇಡಬೇಕು."

■ ಬಸವರಾಜ ಹೊರಟ್ಟಿ
ಸಭಾಪತಿ, ವಿಧಾನ ಪರಿಷತ್



### ಪರಿಸರ ಸಂಬಂಧಿ ಅನುಮತಿ ಸಿಕ್ಕರೆ 3 ತಿಂಗಳಲ್ಲಿ ವಿಜಯಪುರ ಏರ್‌ಪೋರ್ಟ್ ಕಾರ್ಯಾರಂಭ | ಸಚಿವ ಎಂ ಬಿ ಪಾಟೀಲ ಮಾಹಿತಿ

# ವಿಜಯಪುರ ವಿಮಾನ ನಿಲ್ದಾಣಕ್ಕಿದ್ದ ಅಡೆತಡೆ ನಿವಾರಿಸಿದ ಸುಪ್ರೀಂಕೋರ್ಟ್

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಕಾರ್ಯಾರಂಭ ಮಾಡಲು ಸಿದ್ಧವಾಗಿರುವ ವಿಜಯಪುರ ವಿಮಾನ ನಿಲ್ದಾಣಕ್ಕೆ ಸಂಬಂಧಿಸಿದಂತೆ ಇದ್ದ ಪರಿಸರ ಸಂಬಂಧಿ ಅನುಮತಿಯ ಅಡೆತಡೆಯನ್ನು ಸುಪ್ರೀಂಕೋರ್ಟಿನ ತ್ರಿಸದಸ್ಯ ಪೀಠವು ಬುಧವಾರ ನೀಡಿರುವ ಅಂತಿಮ ತೀರ್ಪಿನಲ್ಲಿ ನಿವಾರಿಸಿದೆ. ಹೀಗಾಗಿ ಮುಂದಿನ ಪ್ರಕ್ರಿಯೆಗಳು ನಿರೀಕ್ಷೆಯಂತೆ ನಡೆದರೆ ಮೂರು ತಿಂಗಳೊಳಗೆ ವಿಮಾನ ನಿಲ್ದಾಣದ ಲೋಕಾರ್ಪಣೆ ನೆರವೇರಿಸಬಹುದು ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.

ಈ ಬಗ್ಗೆ ಮಾತನಾಡಿರುವ ಅವರು, ಈ ಸಂಬಂಧ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾ.ಜಯಮಾಲ್ಯ ಬಾಗ್ಚಿ ಮತ್ತು ನ್ಯಾ.ವಿಪುಲ್ ಎಂ ಪಾಂಚೋಲಿ ಅವರಿದ್ದ ಪೀಠವು ನೀಡಿರುವ ಅಂತಿಮ ತೀರ್ಪು ಸ್ವಾಗತಾರ್ಹ ಎಂದಿದ್ದಾರೆ.

ಅಲ್ಲದೆ, ಈ ವಿಚಾರದಲ್ಲಿ ವಿಜಯಪುರ ವಿಮಾನ ನಿಲ್ದಾಣ ಯೋಜನೆಯಲ್ಲಿ ಇರುವ ಸಾರ್ವಜನಿಕ ಹಿತಾಸಕ್ತಿಯನ್ನು ತಿಳಿದುಕೊಂಡು, ರಾಜ್ಯದ ಪರವಾಗಿ ವಿಚಾರ ಮಂಡಿಸಿದ ಕೇಂದ್ರ ಸರ್ಕಾರದ ಸಾಲಿಸಿಟರ್ ಜನರಲ್ ತುಷಾರ್ ಮೆಹತಾ, ಹೆಸರಾಂತ ನ್ಯಾಯವಾದಿಗಳಾದ ಕಪಿಲ್ ಸಿಬಲ್, ದೇವದತ್ತ ಕಾಮತ್, ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಮತ್ತು ರಾಜ್ಯದ ಪರ ವಕೀಲ ನಿಶಾಂತ್ ಪಾಟೀಲ್ ಅವರಿಗೆ ಸಚಿವರು ವಿಶೇಷ ಧನ್ಯವಾದಗಳನ್ನು ಹೇಳಿದ್ದಾರೆ.



ಖಾಸಗಿ ಸೇರಿದಂತೆ ಸಾರ್ವಜನಿಕ ಹಿತಾಸಕ್ತಿಯ ಯೋಜನೆಗಳನ್ನು ಕೈಗೆತ್ತಿಕೊಳ್ಳುವಾಗಲೇ ಪರಿಸರ ಸಂಬಂಧಿ ಅನುಮೋದನೆಗಳನ್ನು ತೆಗೆದುಕೊಳ್ಳಬೇಕಾದ್ದು ಕಡ್ಡಾಯವಾಗಿದೆ. ಇದನ್ನು ಪಾಲಿಸದ ದೇಶದ ಎಲ್ಲಾ ಯೋಜನೆಗಳನ್ನೂ ರದ್ದುಪಡಿಸುವಂತೆ ಸುಪ್ರೀಂಕೋರ್ಟ್ 2025ರ ಮೇ 16ರಂದು ಆದೇಶಿಸಿತ್ತು. ಇದರಿಂದಾಗಿ ವಿಜಯಪುರ ಏರ್ಪೋರ್ಟ್ ಯೋಜನೆಗೂ ಸಂಕಷ್ಟ ಎದುರಾಗಿತ್ತು. ಆಗ ನಾನು ಮೆಹತಾ, ಸಿಬಲ್ ಮತ್ತು ಪಾಟೀಲ್ ಅವರನ್ನು ಸಂಪರ್ಕಿಸಿ, ಈ ತೊಡಕನ್ನು ನಿವಾರಿಸಲು ಕೇಳಿಕೊಂಡಿದ್ದೆ. ಇಂದಿನ ಅಂತಿಮ ತೀರ್ಪಿನಿಂದ ನಿರಾಳವಾಗಿದ್ದೇನೆ ಎಂದು ಅವರು ನೆನಪಿಸಿಕೊಂಡಿದ್ದಾರೆ.

ಪರಿಸರ ಸಂಬಂಧಿ ಅನುಮತಿ ಕೋರಿ ಸಲ್ಲಿಸಿರುವ ಅರ್ಜಿಗಳನ್ನು ವಿಲೇವಾರಿ ಮಾಡುವಂತೆ ಕೇಂದ್ರ ಪರಿಸರ ಮತ್ತು ಅರಣ್ಯ ಸಚಿವಾಲಯಕ್ಕೆ ಈಗ ಹೇಳಲಾಗಿದೆ. ಹೀಗಾಗಿ ವಿಜಯಪುರ ಏರ್ಪೋರ್ಟ್ ಸಂಬಂಧದ ಅಗತ್ಯ ಅನುಮತಿ ಸಿಗಲು ದಾರಿ ಸುಗಮವಾಗಿದೆ. ಇದಾದ ಬಳಿಕ ನಾಗರಿಕ ವಿಮಾನಯಾನ ಮಹಾನಿರ್ದೇಶಕರು ವಿಜಯಪುರಕ್ಕೆ ಭೇಟಿ ನೀಡಲಿದ್ದು, ಅಲ್ಲಿ ಆಗಿರುವ ಕೆಲಸಗಳನ್ನು ಪರಿಶೀಲಿಸಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಈ ಸುಪ್ರೀಂಕೋರ್ಟ್ ಈ ವರ್ಷದ ಏ.1ರಂದು ವಿಚಾರಣೆ ನಡೆಸಿದಾಗ, ಪರಿಸರ ಸಂಬಂಧಿ ಅನುಮತಿಗೆ ಕಾಯುತ್ತಿರುವ ಯೋಜನೆಗಳಿಗೆ ತಾತ್ಕಾಲಿಕ ವಿನಾಯಿತಿ ನೀಡಿ, ವಿಸ್ತೃತ ಅಧ್ಯಯನಕ್ಕೆ ಸೂಚಿಸಿ, ಅಂತಿಮ ತೀರ್ಪನ್ನು ಕಾದಿರಿಸಿತ್ತು. ಇವತ್ತು ನೀಡಿರುವ ತೀರ್ಪಿನಲ್ಲಿ ಶಾಶ್ವತ ವಿನಾಯಿತಿ ನೀಡಿದೆ. ಏತನ್ಮಧ್ಯೆ ನಾವು ವಿಜಯಪುರ ಏರ್ಪೋರ್ಟ್ ಸಂಬಂಧ ಪರಿಸರ ಸಂಬಂಧಿ ಅನುಮತಿ ಕೋರಿ ಅರ್ಜಿ ಹಾಕಿದ್ದೇವೆ ಎಂದು ಅವರು ವಿವರಿಸಿದ್ದಾರೆ.

ಪರಿಸರ ಸಂಬಂಧಿ ಒಪ್ಪಿಗೆ ಸಿಕ್ಕಿದ ಬಳಿಕ ನಾಗರಿಕ ವಿಮಾನಯಾನ ಮಹಾನಿರ್ದೇಶಕರು ವಿಜಯಪುರ ವಿಮಾನ ನಿಲ್ದಾಣದಲ್ಲಿ ಆಗಿರುವ ಕೆಲಸಗಳನ್ನು ಪರಿಶೀಲಿಸಲಿದ್ದಾರೆ. ಅದೊಂದು ಪ್ರಕ್ರಿಯೆ ಮುಗಿದರೆ ವಿಮಾನ ನಿಲ್ದಾಣ ಕಾರ್ಯಾರಂಭಕ್ಕೆ ದಾರಿ ಸುಗಮವಾಗಲಿದೆ ಎಂದು ಪಾಟೀಲ ಹೇಳಿದ್ದಾರೆ.

ಈ ವಿಮಾನ ನಿಲ್ದಾಣ ನಿರ್ಮಾಣಕ್ಕೆ 614ಕೋಟಿ ರೂಪಾಯಿಗಳಿಗೂ ಹೆಚ್ಚು ಹಣ ವಿನಿಯೋಗಿಸಲಾಗಿದೆ. ಇದು ಕಾರ್ಯಾರಂಭ ಮಾಡಿದರೆ ಕಿತ್ತೂರು ಕರ್ನಾಟಕ ಮತ್ತು ನೆರೆ ಹೊರೆ ಪ್ರದೇಶಗಳಿಗೂ ಅನುಕೂಲವಾಗಲಿದೆ ಎಂದು ಪಾಟೀಲ ಪ್ರತಿಪಾದಿಸಿದ್ದಾರೆ.

# ಜನನಿ ಮೊದಲ ಗುರು :ಶಾರದಾ ಮುಳ್ಳೂರ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ನಗರದ ಬಿಎಲ್‌ಡಿಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ಪಬ್ಲಿಕ್ ಸಿಬಿಎಸ್ ಶಾಲೆಯಲ್ಲಿ ಬುಧವಾರ ಗುರುಪೂರ್ಣಿಮೆ ಅಂಗವಾಗಿ ವಿಶೇವಾಗಿ "ಮಾತೃ ವಂದನಾ* ಕಾರ್ಯಕ್ರಮ ನಡೆಯಿತು.

ಈ ಕಾರ್ಯಕ್ರಮದಲಿ ಭಾಗವಹಿಸಿದ ಅಮೇರಿಕದ ಖ್ಯಾತ ಅಕ್ಕ ಸಮ್ಮೇಳನದಲ್ಲಿ ಭಾಗವಹಿಸಿದ್ದ ಸಾಹಿತಿ ಶಾರದಾ ಮುಳ್ಳೂರ ಮಾತನಾಡಿ,

ಪ್ರತಿಯೊಬ್ಬರ ಮನೆಯೇ ಮೊದಲ ಪಾಠ ಶಾಲೆ. ಜನನಿ ಮೊದಲ ಗುರು. ಅವಳಿಂದ ಪಾಠ ಕಲಿತ ನಾವೆಲ್ಲ ಧನ್ಯರು. ಮಗು ಮೊದಲ ಬಾರಿ ಹೊಸ್ತಿಲು ದಾಟಿದರೆ ಟೆಂಗಿನಕಾಯಿ ಒಡೆದು ಸಂಭ್ರಮಿಸುವ ತಾಯಿ, ಮಕ್ಕಳ ಪ್ರತಿ ಬೆಳವಣಿಗೆಯನ್ನು ಕಂಡು ಆನಂದಿಸುತ್ತಾಳೆ. ಅವರು ಬಾನೆತ್ತರಕ್ಕೆ ಬೆಳೆಯಲಿ ಎಂದು ನಿರಪೇಕ್ಷಿತ ಭಾವ ಹೊಂದಿರುವ ತಾಯಿಯ ಗುರುವಂದನೆ, ಮಾತೃವಂದನೆ ಎಂಬುದು ಒಂದೇ ದಿನಕ್ಕೆ ಸಲ್ಲಿಸುವ ಗೌರವವಲ್ಲ. ಅದು ಜೀವನ ಪರ್ಯಂತ ಕೊಡಬೇಕಾದ ಗೌರವ ಎಂದು ಹೇಳಿದರು.

10ನೇ ತರಗತಿಯ ವಿದ್ಯಾರ್ಥಿಗಳ ತಾಯಂದಿರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದು ವಿಶೇಷವಾಗಿತ್ತು. ಎಲ್ಲ ತಾಯಂದಿರನ್ನು ವೇದಿಕೆಯ ಎದುರಿಗೆ ವಿಶೇಷ ಆಸನದಲ್ಲಿ ಕುಳ್ಳಿರಿಸಿ ಮಕ್ಕಳು ಕಳಸ, ಹೂ-ಗಂಧದಿಂದ ಪಾದ ಪೂಜೆಯನ್ನು ಮಾಡಿದರು.

ಇದೇ ವೇಳೆ ವಿಡಿಯೋಗಳ ಮೂಲಕ ಅಮ್ಮನಿಗಾಗಿ ಮಕ್ಕಳು ಹೇಳಿದ ನುಡಿ ನಮನಗಳು ಪರದೆಯ ಮೇಲೆ ಬಂದಾಗ ತಾಯಂದಿರ ಕಣ್ಣಲ್ಲಿ ನೀರು ತುಂಬಿಕೊಂಡವು. ಇಡೀ ವಾತಾವರಣ ಮಮತಾಮಯಿಯಾಗಿತ್ತು. ಭಾವನಾತ್ಮಕತೆಯಲ್ಲಿತ್ತು. ಈ ಸಂದರ್ಭದಲ್ಲಿ ಶಾಲೆಯ ಪ್ರಭಾರಿ ಪ್ರಾಚಾರ್ಯೆ ವಸುಧಾ ನಾರ್ವೇಕರ,

ಹಿರಿಯ ಕಾರ್ಯ ಸಂಯೋಜಕಿ ದೀಪಾ ಜಂಬೂರೆ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. 9ನೇ ತರಗತಿ ವಿದ್ಯಾರ್ಥಿಗಳಾದ ವೈಭವಿ ನಾರ್ವೇಕರ ಮತ್ತು ಅದ್ವಿಕಾ ಸಾಸನೂರ ನಿರೂಪಿಸಿದರು. ವಿದ್ಯಾರ್ಥಿನಿ ನಿಯತಿ ಭಗವತಿ ಗುರು ಪೂರ್ಣಿಮೆಯ ಮಹತ್ವ ಕುರಿತು ಮಾತನಾಡಿದಳು. ವಿದ್ಯಾರ್ಥಿನಿ ಆಶ್ವಿ ಚಿತ್ತಾಪೂರ ವಂದಿಸಿರು.




# ಶರಣರ ವಚನಗಳಲ್ಲಿ ಜೀವನದ ಸಾರ ಅಡಗಿದೆ :ಎಡಿಸಿ ಡಾ.ಔದ್ರಾಮ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಚನಗಳಲ್ಲಿ ಜೀವನದ ಸಾರ ಅಡಗಿದ್ದು, ಸತ್ಯ ಪಥದ ನಡೆ-ನುಡಿ, ಸಮಾಜ ಸುಧಾರಣೆಯ ಮೌಲ್ವಿಕ ವಿಚಾರಗಳು ಬಸವಾದಿ ಶರಣರು ರಚನೆಯ ವಚನಗಳು ಬೆಳಕು ಚೆಲ್ಲುತ್ತವೆ ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಬುಧವಾರ ಆಯೋಜಿಸಿದ್ದ ಶಿವಶರಣ ಶ್ರೀ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಹಡಪದ ಅಪ್ಪಣ್ಣನವರ ರಚನೆಯ 150ಕ್ಕೂ ಹೆಚ್ಚು ವಚನಗಳು ಜೀವನದ ಸತ್ಯ, ಮಾನವೀಯ ಮೌಲ್ಯಗಳು ಹಾಗೂ ಮಾನವೀಯತೆಯನ್ನು ಪ್ರತಿಪಾದಿಸುತ್ತವೆ. ಸಮಾಜದ ಒಳಿತಿಗಾಗಿ ಶ್ರಮಿಸಿದ ಶರಣರು ಜನರಾಡುವ ಭಾಷೆಯಲ್ಲಿ ವಚನಗಳನ್ನು ಜನಮಾನಸಕ್ಕೆ ನೀಡಿ, ಸಮಾಜ ಸುಧಾರಣೆಗೆ ಅವರ ಕೊಡುಗೆ ಮಹತ್ತರವಾಗಿದೆ. ತನ್ನ ತಾನು ಅರಿತು ನಡೆಯಬೇಕೆಂಬ ಶರಣರ ಆಶಯದಂತೆ ನಡೆಯೋಣ ಯುವ ಪೀಳಿಗೆ ಶರಣ ಸಾಹಿತ್ಯ ಅಧ್ಯಯನ ಮಾಡುವ ಮೂಲಕ ವಚನಗಳಲ್ಲಿ ಸತ್ವ ತಿಳಿಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಬಿ.ಎಂ. ಪಾಟೀಲ ಮಾತನಾಡಿ, ಸತ್ಯ, ಶುದ್ಧತೆ, ಕಾಯಕ ಮತ್ತು ನಿಷ್ಠೆಯ ಮೌಲ್ಯಗಳನ್ನು ಪ್ರತಿಪಾದಿಸುವ ವಚನ ಸಾಹಿತ್ಯವು ಸಮಾಜಕ್ಕೆ ದಾರಿದೀಪವಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪ ನಿರ್ದೇಶಕ ನಾಗಭೂಷಣ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಸಂತೋಷ್ ಭೋವಿ ಸೇರಿದಂತೆ ಭೀಮರಾಯ ಜಿಗಜಣಗಿ, ಸೋಮನಗೌಡ ಕಲ್ಲೂರ, ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮೆರವಣಿಗೆ ಚಾಲನೆ: ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನ ಆವರಣದಲ್ಲಿ ಶಿವಶರಣ ಶ್ರೀ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಅಪರ ಜಿಲ್ಲಾಧಿಕಾರಿಗಳಾದ ಡಾ.ಔದ್ರಾಮ ಅವರು ಚಾಲನೆ ಮೆರವಣಿಗೆಗೆ ಚಾಲನೆ ನೀಡಿದರು.

ಈ ಸಂದರ್ಭ ಜಿಪಂ ಉಪ ನಿರ್ದೇಶಕ ನಾಗಭೂಷಣ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯ ನಿರ್ದೇಶಕರಾದ ಸಂತೋಷ ಭೋವಿ ಸಮಾಜದ ಮುಖಂಡರ ಬಸವರಾಜ ಶಿವಶರಣ , ಅಶೋಕ ನಾವಿ, ಭೀಮರಾಯ ಜಿಗಜಿಣಗಿ, ಸೋಮನಾಥ ಕಲ್ಲೂರ ಇದ್ದರು.

### ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿಕೆ

# ಬಬಲೇಶ್ವರದ ಪ್ರಗತಿಯ ಪಯಣ ನಿರಂತರವಾಗಿರಲಿದೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಬಲೇಶ್ವರ ತಾಲೂಕು ಕೇಂದ್ರಕ್ಕೆ ಅಗತ್ಯವಾಗಿರುವ ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಸೋಮವಾರ ಮುಸ್ಸಂಜೆ ಬಬಲೇಶ್ವರ ಪಟ್ಟಣದಲ್ಲಿ 200 ಲಕ್ಷ ವೆಚ್ಚದ ತಾಲೂಕು ಕ್ರೀಡಾಂಗಣ 300 ಲಕ್ಷ ವೆಚ್ಚದ ಅಗ್ನಿಶಾಮಕ ಠಾಣೆ, 575 ಲಕ್ಷ ವೆಚ್ಚದಲ್ಲಿ ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಬಬಲೇಶ್ವರದ ಅಭಿವೃದ್ಧಿಗೆ ಮತ್ತೊಂದು ಐತಿಹಾಸಿಕ ಹೆಜ್ಜೆ ಇದಾಗಿದೆ. ಯುವ ಪ್ರತಿಭೆಗಳ ಕನಸುಗಳಿಗೆ ವೇದಿಕೆಯಾಗುವ ಕ್ರೀಡಾಂಗಣ, ಜನರ ಜೀವ-ಆಸ್ತಿಯ ರಕ್ಷಣೆಗೆ ಇನ್ನಷ್ಟು ಶಕ್ತಿ ತುಂಬುವ ಅಗ್ನಿಶಾಮಕ ಠಾಣೆ ಹಾಗೂ ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ತಲುಪಿಸುವ ಸುಸಜ್ಜಿತ ಆರೋಗ್ಯ ಕೇಂದ್ರಕ್ಕೆ ಭೂಮಿ ಪೂಜೆ ಮಾಡಲಾಗಿದೆ. ಇವು ಕೇವಲ ಕಟ್ಟಡಗಳಲ್ಲ. ಜನರ ಬದುಕಿನ ಗುಣಮಟ್ಟವನ್ನು ಬದಲಾಯಿಸುವ ಅಭಿವೃದ್ಧಿಯ ಬುನಾದಿಗಳಾಗಿವೆ. ಜನರ ಆಶೀರ್ವಾದವೇ ನಮ್ಮ ಶಕ್ತಿ. ಅಭಿವೃದ್ಧಿಯೇ ನಮ್ಮ ಆದ್ಯತೆ. ಬಬಲೇಶ್ವರದ ಪ್ರಗತಿಯ ಪಯಣ ನಿರಂತರವಾಗಿರಲಿದೆ ಎಂದು ಅವರು




ಹೇಳಿದರು.

ಹಿಂದೆ ಬಬಲೇಶ್ವರ ತಾಲೂಕಿಗಾಗಿ ಹೋರಾಟ ನಡೆದಾಗ ನಾನು ಶಾಸಕನಾಗಿರದಿದ್ದರೂ ಹೋರಾಟಗಾರರ ಮನವಿ ಮೇರೆಗೆ ಕೃಷ್ಣ ಅವರ ಸರಕಾರದಲ್ಲಿ ತಾಲೂಕಿ ಕೇಂದ್ರ ಘೋಷಣೆ ಮಾಡಿಸಿದ್ದೇ. ಮುಂದೆ ಶತ ಪ್ರಯತ್ನ ಮಾಡಿ ಮುಳವಾಡ ಏತ ನೀರಾವರಿಯಲ್ಲೂ ಕ್ಷೇತ್ರವನ್ನು ಸೇರಿಸಿ ಸಿದ್ಧೇಶ್ವರ ಶ್ರೀಗಳ ಆಶಯದಂತೆ ನೀರು ಹರಿಸಿದ್ದೇನೆ. ಬಬಲೇಶ್ವರ ಸೇರಿ ಜಿಲ್ಲೆಯ ಎಲ್ಲ ಕ್ಷೇತ್ರಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಯುವಕರಿಗಾಗಿ ಇಲ್ಲಿ ಶೀಘ್ರದಲ್ಲಿ ಅತ್ಯಾಧುನಿಕ ಜಿಮ್ ಆರಂಭಿಸಲಾಗುವುದು. ಎಲ್ಲ ಶಾಲೆಗಳಿಗೆ ಸಲಕರಣೆಗಳನ್ನು ನೀಡಲಾಗಿದೆ. 8 ರಿಂದ10ನೇ ತರಗತಿ ಈಗ ಸ್ಮಾರ್ಟಕ್ಲಾಸ್ ಸೌಲಭ್ಯ ಒದಗಿಸಲಾಗಿದ್ದು, ಮುಂಬರುವ ದಿನಗಳಲ್ಲಿ 5ನೇ ತರಗತಿಯಿಂದ 7ನೇ ತರಗತಿಗಳಿಗೂ ಸ್ಮಾರ್ಟ್ ಕ್ಲಾಸ್ ಸೌಲಭ್ಯಗಳನ್ನು ವಿಸ್ತರಿಸಲಾಗುವುದು. ಕೆರೆ ತುಂಬಿಸುವ ಯೋಜನೆ ಸಫಲವಾಗಿದ್ದು, ಈಗ ಹಳ್ಳಗಳನ್ನು ತುಂಬುವ ಯೋಜನೆ ಅನುಷ್ಠಾನ ಮಾಡಲಾಗುತ್ತಿದೆ. ಈ ಸಲ ದ್ರಾಕ್ಷಿ ಬೆಳೆದು ಹಲವಾರು ರೈತರು ಕೋಟಿಗಟ್ಟಲೇ ಆದಾಯ ಗಳಿಸಿದ್ದಾರೆ. ಹೀಗಾಗಿ ಯಾರೂ ತಮ್ಮ ಭೂಮಿಗಳನ್ನು ಮಾರಬೇಡಿ. ಈ ಭೂಮಿ ನಿಮಗಷ್ಟೇ ಅಲ್ಲ, ನಿಮ್ಮ ಮುಂದಿನ ಪೀಳಿಗೆಗೂ ಬದುಕು ಕಟ್ಟಿಕೊಳ್ಳಲು ಅಗತ್ಯವಾಗಿದೆ. ಈ ಭೂಮಿಗೆ ಬಂಗಾರದ ನನ್ನ ಬೆಲೆ ತರುವ ಕೆಲಸವನ್ನು ಕ್ಷೇತ್ರದಲ್ಲಿ ಮಾಡಿರುವ ತೃಪ್ತಿ ತಮಗಿದೆ. ಇಲ್ಲಿನ ಶ್ರೀ ಗುರುಪಾದೇಶ್ವರು, ಶಾಂತವೀರ ಅಪ್ಪಗಳ ಆಶೀರ್ವಾದ ಸದಾ ನನ್ನ ಮೇಲಿದೆ ಇದೆ ಎಂದು ಸಚಿವರು ಹೇಳಿದರು.

ಮುಖಂಡ ವಿ. ಎನ್. ಬಿರಾದಾರ ಮಾತನಾಡಿ, ಸಚಿವ ಎಂ. ಬಿ. ಪಾಟೀಲರು ಬಬಲೇಶ್ವರಕ್ಕೆ ಕಲ್ಪವೃಕ್ಷವಾಗಿದ್ದರೆ. ನಾವು ಕೇಳಿದ್ದಕ್ಕಿಂತ ಹೆಚ್ಚು ಅಭಿವೃದ್ಧಿ ಕಾರ್ಯ ಮಾಡಿ ಎಲ್ಲ ಜನಪ್ರತಿನಿಧಿಗಳಿಗೆ ಮಾದರಿಯಾಗಿದ್ದಾರೆ. ಅಭಿವೃದ್ಧಿಯಲ್ಲಿ ಎಲ್ಲರಿಗಿಂತಲೂ ಹೆಚ್ಚು ಕೆಲಸ ಮಾಡುತ್ತಿದ್ದಾರೆ. ಅವರು ತಮ್ಮ ಕಾಯಕದ ಮೂಲಕ ಇನ್ನೂ ಹೆಚ್ಚಿನ ಸ್ಥಾನ ಅಲಂಕರಿಸಲಿದ್ದಾರೆ. ಶ್ರೀ ಗುರುಪಾದೇಶ್ವರರು ಮತ್ತು ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಆಶೀರ್ವಾದ ಸಚಿವರ ಮೇಲಿದೆ. ಇಂಥ ಆದರ್ಶವಂತದರಿಗೆ ಯುವಕರು ಸೇರಿದಂತೆ ನಾವೆಲ್ಲರೂ ಸದಾ ಬೆನ್ನೆಲುಬಾಗಿ ನಿಲ್ಲಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಬಲೇಶ್ವರ ಬೃಹನ್ಮಠದ ಮಹಾದೇವ ಶಿವಾಚಾರ್ಯರು, ಮುಖಂಡರಾದ ಈರನಗೌಡ ಬಿರಾದಾರ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಲ್ಲು ದಳವಾಯಿ, ಮುಖಂಡರಾದ ಶ್ರೀಶೈಲಗೌಡ ಪಾಟೀಲ ನಿಡೋಣಿ, ವಿ. ಎಸ್. ಪಾಟೀಲ, ವಿದ್ಯಾರಾಣಿ ತುಂಗಳ, ಉಮೇಶ ಮಲ್ಲನ್ನವರ, ಆನಂದ ಬೂದಿಹಾಳ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಮಲ್ಲನಗೌಡ ಬಿರಾದರ, ಯುವ ಸಬಲೀಕರಣ ಇಲಾಖೆ ಸಹಾಯಕ ನಿರ್ದೇಶಕ ರಾಜಶೇಖರ ದೈವಾಡಿ, ಅಗ್ನಿಶಾಮಕ ಸೇವೆ ಇಲಾಖೆ ಜಿಲ್ಲಾ ಅಧಿಕಾರಿಗಳು ಉಪಸ್ಥಿತರಿದ್ದರು.



# ಮಾಜಿ ಸೈನಿಕರ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿಪೂಜೆ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ನಗರದಲ್ಲಿ ವಾಸಿಸುವ 120ಕ್ಕೂ ಅಧಿಕ ಮಾಜಿ ಸೈನಿಕರಿಗೆ ಬಹುದಿನಗಳಿಂದ ನಿರೀಕ್ಷಿತವಾಗಿದ್ದ ಸಮುದಾಯ ಭವನ ನಿರ್ಮಾಣವಾಗುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ನಗರದ ಮಾಂಗಲ್ಯ ಭವನದ ಹಿಂಭಾಗದಲ್ಲಿ ನಿರ್ಮಾಣಗೊಳ್ಳಲಿರುವ 2025-26ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ ಅಂದಾಜು ರೂ.25ಲಕ್ಷ ವೆಚ್ಚದಲ್ಲಿ ಮಾಜಿ ಸೈನಿಕರ ಸಮುದಾಯ ಭವನ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಈ ಭವನವು ಮಾಜಿ ಸೈನಿಕರು ತಮ್ಮ ಸಭೆಗಳು, ಸಮಾರಂಭಗಳು, ಸಂಘದ ಸಭೆಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಗೌರವ ಸಮಾರಂಭಗಳು ಹಾಗೂ ಇತರೆ ಸಾಮಾಜಿಕ ಚಟುವಟಿಕೆಗಳನ್ನು ಒಂದೇ ಸೂರಿನಡಿ ಆಯೋಜಿಸಲು ಅನುಕೂಲವಾಗಲಿದೆ. ಇದೀಗ ನಿರ್ಮಾಣವಾಗುತ್ತಿರುವ ಸಮುದಾಯ ಭವನದಿಂದ ಅವರ ಸಂಘಟನಾ ಚಟುವಟಿಕೆಗಳಿಗೆ ಹೊಸ ಉತ್ತೇಜನ ದೊರೆಯಲಿದೆ ಎಂದರು.

ಈ ವೇಳೆ ಪೌರಾಯುಕ್ತ ರವಿ ಶಿರಗುಪ್ಪ, ವಿ.ಬಿ.ಕುರಡಿ, ಮುತ್ತು ಮುಂಡೇವಾಡಗಿ, ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಅಶೋಕ ಕೋಳಾರಿ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ಶ್ರೀಶೈಲ ಯಳಮೇಲಿ, ಭೀಮನಗೌಡ ಗೋಲಗೇರಿ, ಶಾಂತು ರಾಣಾಗೋಳ, ಶಾಂತು ದುರ್ಗಿ ಸೇರಿದಂತೆ ಸಿಂದಗಿ ಭಾಗದ ದೇಶದ ಹೆಮ್ಮೆಯ ನಿವೃತ್ತ ಸೈನಿಕರು, ಹಿರಿಯರು, ಗಣ್ಯರು ಹಾಗೂ ದೇಶಾಭಿಮಾನಿ ಸಾರ್ವಜನಿಕರು ಇದ್ದರು.

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘದಿಂದ "ವಿಜಯಪುರ ಜಿಲ್ಲಾ ಛಾಯಾಗ್ರಾಹಕರ ಸಂಘದ ಸದಸ್ಯರ ಮಕ್ಕಳಿಗೆ ಹಾಗೂ ತಾಲೂಕಿನ ಸಂಘದ ಸದಸ್ಯರ ಮಕ್ಕಳಿಗೆ 2025-2026ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ.ಯಲ್ಲಿ ಶೇ.80% ಕಿಂತ ಹೆಚ್ಚು ಅಂಕ ಪಡೆದು ಉತ್ತೀರ್ಣಗೊಂಡ. ಸದ್ಯಸ್ಯರ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಸಂಘ ದಿಂದ ಪ್ರತಿಭಾ ಪುರಸ್ಕಾರ ನೀಡಲು ನಿರ್ಧರಿಸಲಾಗಿದೆ.

ವಿಜಯಪುರ ಜಿಲ್ಲೆಯ ಹಾಗೂ ತಾಲೂಕಿನ ಸಂಘದ ಸದಸ್ಯರು ತಮ್ಮ ಮಕ್ಕಳ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿಯ ಧೃಡೀಕೃತ ಅಂಕಪಟ್ಟಿ, ಆಧಾರ ಕಾರ್ಡ, ವಿದ್ಯಾರ್ಥಿಯ ಬ್ಯಾಂಕ್ ವಿವರ, ಇತ್ತಿಚ್ಚಿನ ಎರಡು ಪಾಸಪೋರ್ಟ ಅಳತೆಯ ಭಾವಚಿತ್ರ ಹಾಗೂ ಛಾಯಾಗ್ರಾಹಕರ ಸಂಘದ ಗುರುತಿನ ಚೀಟಿಯೊಂದಿಗೆ ದಿನಾಂಕ 15-08-2026ರ ಒಳಗಡೆ ಸಂಘದ ಕಛೇರಿ, ಅಧ್ಯಕ್ಷರು, ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘ ಅಂಗಡಿ ನಂ. 201, ಮೊದಲನೆ ಮಹಡಿ, ಎಸ್.ಎಸ್. ಕಾಂಪ್ಲೇಕ್ಸ್, ಸಿದ್ದೇಶ್ವರ ದೇವಸ್ಥಾನದ ಹತ್ತಿರ, ಬಿ.ಎಲ್.ಡಿ.ಇ. ರಸ್ತೆ, ವಿಜಯಪುರ-586101 ಇಲ್ಲಿಗೆ ತಲುಪಿಸಲು ವಿನಂತಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ಅಧ್ಯಕ್ಷರು, ರಮೇಶ ಚವ್ಹಾಣ ಮೊ : 9611563508, ಕಾರ್ಯದರ್ಶಿ, ಸತೀಶ ಕಲಾಲ ಮೋ : 9900905291, ನಿರ್ದೇಶಕರಾದ, ಸುನೀಲ ಗಲಗಲಿ 9448897073 ಅವರನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

# ಶಿಷ್ಯವೇತನ, ಪುಸ್ತಕ ಅನುದಾನಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026-27ನೇ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ಸರ್ಕಾರದ ಮಾನ್ಯತೆ ಪಡೆದ ಶಾಲೆ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ ಶಿಷ್ಯವೇತನ ಹಾಗೂ ಪುಸ್ತಕ ಅನುದಾನ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಪುಸ್ತಕ ಅನುದಾನ (ಕಲ್ಯಾಣ ನಿಧಿಯಿಂದ): 1ನೇ ತರಗತಿಯಿಂದ ದ್ವಿತೀಯ ಪಿಯುಸಿವರೆಗೆ ವ್ಯಾಸಂಗ ಮಾಡುತ್ತಿರುವ, ಮಿಲಿಟರಿ ಪಿಂಚಣಿ ರಹಿತ ಕರ್ನಾಟಕದ ಮಾಜಿ ಸೈನಿಕರ ಹಾಗೂ ಕರ್ನಾಟಕದಲ್ಲಿ ನೆಲೆಸಿರುವ ಹೊರರಾಜ್ಯದ ಮಾಜಿ ಸೈನಿಕರ ಮಕ್ಕಳಿಗೆ (ಅಧಿಕಾರಿಗಳ ಮಕ್ಕಳನ್ನು ಹೊರತುಪಡಿಸಿ) ನೀಡಲಾಗುತ್ತದೆ. ಶಿಷ್ಯವೇತನ (ವಿಶೇಷ ನಿಧಿಯಿಂದ): ಪದವಿ, ಡಿಪ್ಲೋಮಾ, ಜೆ.ಓ.ಸಿ ಹಾಗೂ ವೃತ್ತಿಪರ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಾಜಿ ಸೈನಿಕರ ಮಕ್ಕಳಿಗೆ (ಅಧಿಕಾರಿಗಳ ಮಕ್ಕಳನ್ನು ಹೊರತುಪಡಿಸಿ) ಮಂಜೂರು ಮಾಡಲಾಗುತ್ತದೆ.

ಅರ್ಹ ಅಭ್ಯರ್ಥಿಗಳು ಸೂಕ್ತ ದಾಖಲೆಗಳೊಂದಿಗೆ ನವೆಂಬರ್.30ರೊಳಗಾಗಿ ತಮ್ಮ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ವಿಜಯಪುರ ಕಚೇರಿಯ ದೂರವಾಣಿ ಸಂಖ್ಯೆ: 08352-250913 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಶಿಷ್ಯವೇತನಕ್ಕೆ ಮಾಜಿ ಸೈನಿಕರ ಮಕ್ಕಳಿಂದ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026-27ನೇ ಸಾಲಿಗೆ ಕರ್ನಾಟಕದ ಮೂಲ ನಿವಾಸಿಯಾಗಿರುವ ಮಿಲಿಟರಿ ಪಿಂಚಣಿದಾರರು ಹಾಗೂ ಮಾಜಿ ಸೈನಿಕರ (ಅಧಿಕಾರಿಗಳನ್ನು ಹೊರತುಪಡಿಸಿ) ಮಕ್ಕಳಿಗೆ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರದಿಂದ ಮಾನ್ಯತೆ ಪಡೆದ ವಿದ್ಯಾಸಂಸ್ಥೆಗಳಲ್ಲಿ 1ನೇ ತರಗತಿಯಿಂದ ಅಂತಿಮ ವರ್ಷದ ಪದವಿ, ಡಿಪ್ಲೋಮಾ ಹಾಗೂ ವೃತ್ತಿಪರ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಹರಾಗಿರುತ್ತಾರೆ. ಅರ್ಜಿ ನಮೂನೆಗಳನ್ನು ವಿಜಯಪುರ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಕಚೇರಿಯಿಂದ ಪಡೆದುಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದೆ. ವೃತ್ತಿಪರ ಪದವಿ ವಿದ್ಯಾರ್ಥಿಗಳು ಭರ್ತಿ ಮಾಡಿದ ಅರ್ಜಿ ಸಲ್ಲಿಸಲು ನವೆಂಬರ್ 30. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಉಪ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ವಿಜಯಪುರ ಇವರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08352-250913 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.



# ಬಿ.ಎಲ್.ಓ ವೈಷ್ಣವಿ ಉಮರ್ಜಿ ಗೆ ಅಧಿಕಾರಿಗಳಿಂದ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಸ್ಥಳೀಯ ಸಂಸ್ಥೆಗಳ ಚುನಾವಣಾ ಪೂರ್ವ ಸಿದ್ಧತೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಎಸ್‌ಐಆರ್ ನೋಂದಣಿ ಪ್ರಕ್ರಿಯೆಯನ್ನು ತಮ್ಮ ವ್ಯಾಪ್ತಿಯಲ್ಲಿ ಪ್ರತಿಶತ ನೂರರಷ್ಟು (100%) ಅತ್ಯಂತ ಯಶಸ್ವಿಯಾಗಿ ಪೂರ್ಣಗೊಳಿಸಿದ ಬಿ.ಎಲ್.ಓ ವೈಷ್ಣವಿ ಉಮರ್ಜಿ ಅವರನ್ನು ಅಧಿಕಾರಿಗಳು ಸತ್ಕರಿಸಿ, ಗೌರವಿಸಿದರು.

ಇಂಡಿ ನಗರದ ನಗರಸಭಾ ಕಾರ್ಯಾಲಯದಲ್ಲಿ ನಡೆದ ಸರಳ ಸಮಾರಂಭದಲ್ಲಿ ತಹಸೀಲ್ದಾರ್ ನಾಗೇಂದ್ರ ಕೋಳಶೆಟ್ಟಿ ಹಾಗೂ ಇಂಡಿ ಪುರಸಭೆ ಪೌರಾಯುಕ್ತ ಶಿವಾನಂದ ಪೂಜಾರಿ ಅವರು ವೈಷ್ಣವಿ ಉಮರ್ಜಿ ಅವರಿಗೆ ಶಾಲು ಹೊದಿಸಿ, ಸನ್ಮಾನ ಪತ್ರ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ್ ನಾಗೇಂದ್ರ ಕೋಳಶೆಟ್ಟಿ "ಎಸ್‌ಐಆರ್ ನೋಂದಣಿ ಕಾರ್ಯವು ಅತ್ಯಂತ ಜವಾಬ್ದಾರಿಯುತ ಹಾಗೂ ನಿಗದಿತ ಅವಧಿಯೊಳಗೆ ಮುಗಿಸಬೇಕಾದ ಕೆಲಸವಾಗಿದೆ. ಇಂತಹ ಮಹತ್ವದ ಕಾರ್ಯವನ್ನು ಬಿ.ಎಲ್.ಓ ವೈಷ್ಣವಿ ಉಮಾರ್ಜಿ ಅವರು ನಿಷ್ಠೆಯಿಂದ ನಿರ್ವಹಿಸಿ, ಶೇ. 100 ರಷ್ಟು ಪ್ರಗತಿ ಸಾಧಿಸಿರುವುದು ಶ್ಲಾಘನೀಯ. ಇವರ ಕರ್ತವ್ಯ ಪ್ರಜ್ಞೆ ಇತರರಿಗೂ ಮಾದರಿಯಾಗಿದೆ" ಎಂದು ಪ್ರಶಂಸಿಸಿದರು.

ಪೌರಾಯುಕ್ತ ಶಿವಾನಂದ ಪೂಜಾರಿ ಅವರು ಮಾತನಾಡಿ, "ಚುನಾವಣಾ ಕಾರ್ಯಗಳಲ್ಲಿ ಬಿ.ಎಲ್.ಒಗಳ ಪಾತ್ರ ಅತ್ಯಂತ ಪ್ರಮುಖವಾಗಿದೆ. ತಮಗೆ ವಹಿಸಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸಿ, ನೂರಕ್ಕೆ ನೂರರಷ್ಟು ಸಾಧನೆ ಮಾಡಿದ ವೈಷ್ಣವಿ ಅವರ ಕಾರ್ಯವೈಖರಿ ಎಲ್ಲರಿಗೂ ಪ್ರೇರಣೆಯಾಗಲಿ" ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಇಂಡಿ ನಗರ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಶ್ರೀಕಾಂತ ಕೂಡಿಗನೂರ, ಮುಖಂಡ ಸುದೀರ ಕರಿಕಟ್ಟಿ, ನಗರಸಭೆ ಕಂದಾಯ ಅಧಿಕಾರಿ ಸದಾಶಿವ ನಿಂಬಾಳ್ಕರ್, ಕಿರಿಯ ಆರೋಗ್ಯ ನಿರೀಕ್ಷಕಿ ಸಂಗೀತಾ ಕೋಳಿ ಸೇರಿದಂತೆ ತಹಸೀಲ್ದಾರ್ ಕಚೇರಿ ಹಾಗೂ ಪುರಸಭೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಬರ ಸೆಳೆದ ಭೂಮಿಗೆ ಪರ್ಯಾಯ ಬೆಳೆ ಸಂಜೀವಿನಿ

■ ಉದಯರಶ್ಮಿ ದಿನಪತ್ರಿಕೆ

ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಈ ಬಾರಿ ಮುಂಗಾರು ಮಳೆ ಕೈಕೊಟ್ಟಿದ್ದು, ಭೀಕರ ಬರಗಾಲ ಆವರಿಸಿದೆ. ಜಲಾಶಯಗಳು ಬತ್ತುತ್ತಿವೆ, ಅಂತರ್ಜಲ ಮಟ್ಟ ತೀವ್ರವಾಗಿ ಕುಸಿಯುತ್ತಿದೆ. ಇಂತಹ ಕಠಿಣ ಪರಿಸ್ಥಿತಿಯಲ್ಲಿ ಸಾಂಪ್ರದಾಯಿಕ ಮತ್ತು ಹೆಚ್ಚು ನೀರು ಬೇಡುವ ಬೆಳೆಗಳನ್ನು ನಂಬಿ ಕೂತರೆ ರೈತರು ಸಂಪೂರ್ಣ ಆರ್ಥಿಕ ನಷ್ಟ ಅನುಭವಿಸಬೇಕಾಗುತ್ತದೆ.

ಅದಕ್ಕಾಗಿಯೇ ಕೃಷಿ ತಜ್ಞರು ಈಗ 'ಪರ್ಯಾಯ ಬೆಳೆ ಪದ್ಧತಿ' ಯನ್ನು ಅಳವಡಿಸಿಕೊಳ್ಳಲು ಕರೆ ನೀಡಿದ್ದಾರೆ. ಕಡಿಮೆ ನೀರು, ಕಡಿಮೆ ಅವಧಿ ಮತ್ತು ಕನಿಷ್ಠ ವೆಚ್ಚದಲ್ಲಿ ಕೈತುಂಬ ಆದಾಯ ತರುವ ಬೆಳೆಗಳತ್ತ ಮುಖ ಮಾಡುವುದು ಇಂದಿನ ತುರ್ತು ಅಗತ್ಯವಾಗಿದೆ.

### ಏನಿದು ಪರ್ಯಾಯ ಬೆಳೆ ಪದ್ಧತಿ?

ಬರಗಾಲದ ಸಮಯದಲ್ಲಿ ನೀರಾವರಿ ಸೌಲಭ್ಯ ಕಡಿಮೆಯಾದಾಗ, ಹೆಚ್ಚು ನೀರು ಬೇಡುವ ಬೆಳೆಗಳಾದ ಭತ್ತ, ಕಬ್ಬು ಮತ್ತು ಅಡಿಕೆಗೆ ಬೆಳೆಗಳಿಗೆ ಪರ್ಯಾಯವಾಗಿ ಕಡಿಮೆ ನೀರಿನಲ್ಲಿ ಬೆಳೆಯುವ ಅಲ್ಪಾವಧಿ ಬೆಳೆಗಳನ್ನು ಬೆಳೆಯುವುದೇ ಪರ್ಯಾಯ ಬೆಳೆ ಪದ್ಧತಿ. ಇದು ಮಣ್ಣಿನ ತೇವಾಂಶವನ್ನು ಸಮರ್ಥವಾಗಿ ಬಳಸಿಕೊಂಡು, ರೈತರಿಗೆ ಆರ್ಥಿಕ ನಷ್ಟವಾಗದಂತೆ ತಡೆಯುತ್ತದೆ.

ವಲಯವಾರು ಮತ್ತು ಜಿಲ್ಲಾವಾರು ಪರ್ಯಾಯ



ಬೆಳೆಗಳ ಮಹತ್ವದ ಮಾಹಿತಿ

ರಾಜ್ಯದ ಮಣ್ಣಿನ ಗುಣಲಕ್ಷಣ ಮತ್ತು ಹವಾಮಾನ ವೈವಿಧ್ಯತೆಗೆ ಅನುಗುಣವಾಗಿ ಕೃಷಿ ಇಲಾಖೆಯು ಜಿಲ್ಲಾವಾರು ಪರ್ಯಾಯ ಬೆಳೆಗಳನ್ನು ಶಿಫಾರಸು ಮಾಡಿದೆ.

### ಉತ್ತರ ಕರ್ನಾಟಕ ವಲಯ

(ವಿಜಯಪುರ, ಬಾಗಲಕೋಟೆ, ಕಲಬುರಗಿ, ಬೆಳಗಾವಿ ಜಿಲ್ಲೆಗಳು)

ಈ ಭಾಗದಲ್ಲಿ ಸಾಂಪ್ರದಾಯಿಕವಾಗಿ ಅತಿ ಹೆಚ್ಚು ನೀರು ಬೇಡುವ ಕಬ್ಬು ಮತ್ತು ಭತ್ತವನ್ನು ವ್ಯಾಪಕವಾಗಿ ಬೆಳೆಯಲಾಗುತ್ತದೆ. ಆದರೆ ಪ್ರಸ್ತುತ ಬರಗಾಲದ ಪರಿಸ್ಥಿತಿಯಲ್ಲಿ ಇವುಗಳ ಬದಲಾಗಿ ಕಡಿಮೆ ನೀರಿನಲ್ಲಿ ಹಾಗೂ ಕಡು ಬಿಸಿಲಲ್ಲೂ ತಡೆದುಕೊಂಡು ನಿಲ್ಲುವ ಸಜ್ಜೆ, ನವಣೆ, ಜೋಳ, ಕಡಲೆ, ಸೂರ್ಯಕಾಂತಿ, ಹೆಸರು ಮತ್ತು ಮಟ್ಕಿ (ಮಡಿಕೆ ಕಾಳು) ಬೆಳೆಗಳನ್ನು ಬೆಳೆಯಲು ಶಿಫಾರಸು ಮಾಡಲಾಗಿದೆ. ಇವು ಕಡಿಮೆ ದಿನಗಳಲ್ಲಿ ರೈತರ ಕೈಸೇರುತ್ತವೆ.

### ಮಧ್ಯ ಕರ್ನಾಟಕ ವಲಯ

(ಚಿತ್ರದುರ್ಗ, ದಾವಣಗೆರೆ, ತುಮಕೂರು, ಬಳ್ಳಾರಿ ಜಿಲ್ಲೆಗಳು) : ತುಂಗಭದ್ರಾ ಮತ್ತು ಇತರೆ ನದಿ ಪಾತ್ರದ ನಂಬಿಕೆಯಲ್ಲಿ ಇಲ್ಲಿ ಭತ್ತ ಮತ್ತು ಕಬ್ಬನ್ನು ಹೆಚ್ಚಾಗಿ



ಬೆಳೆಯಲಾಗುತ್ತಿತ್ತು. ಆದರೆ ಈಗ ನೀರಿನ ಅಭಾವ ತೀವ್ರವಾಗಿರುವುದರಿಂದ, ರೈತರು ರಾಗಿ, ಹರಳು (ಅಚಿ-ಣಂಡಿ), ಶೇಂಗಾ (ನೆಲಗಡಲೆ), ಸಾಮೆ, ಕೊರಲೆ ಮತ್ತು ನವಣೆ ಬೆಳೆಗಳತ್ತ ಗಮನ ಹರಿಸಬೇಕು. ವಿಶೇಷವಾಗಿ ಹರಳು ಮತ್ತು ಶೇಂಗಾ ಮಳೆಯಾಶ್ರಿತ ಪ್ರದೇಶಗಳಿಗೂ ಅತ್ಯುತ್ತಮ ಪರ್ಯಾಯವಾಗಿವೆ.

### ದಕ್ಷಿಣ ಕರ್ನಾಟಕ ವಲಯ

(ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ ಜಿಲ್ಲೆಗಳು) : ಕೆ.ಆರ್.ಎಸ್. ಜಲಾಶಯದ ಅಚ್ಚುಕಟ್ಟು ಪ್ರದೇಶವಾಗಿರುವ ಈ ವಲಯದಲ್ಲಿ ಭತ್ತ ಮತ್ತು ಕಬ್ಬು ಪ್ರಮುಖ ಬೆಳೆಗಳಾಗಿದ್ದವು. ಪ್ರಸ್ತುತ ನೀರಿನ ಕೊರತೆಯಿಂದಾಗಿ ಇವುಗಳ ಜಾಗದಲ್ಲಿ ಅಲ್ಪಾವಧಿ ದ್ವಿದಳ ಧಾನ್ಯಗಳಾದ ಅಲಸಂದಿ (ಬೆಣ್ಣೆಕಾಳು), ಹೆಸರು ಬೇಳೆ, ಉದ್ದು, ಸಾಸಿವೆ ಮತ್ತು ಮೇವಿನ ಜೋಳವನ್ನು ಬೆಳೆಯುವುದು ಸೂಕ್ತ. ಇದು ಜಾನುವಾರುಗಳ ಮೇವಿನ ಕೊರತೆಯನ್ನೂ ನೀಗಿಸುತ್ತದೆ.

### ಕರಾವಳಿ ಮತ್ತು ಮಲೆನಾಡು ವಲಯ

(ಶಿವಮೊಗ್ಗ, ಚಿಕ್ಕಮಗಳೂರು, ಉತ್ತರ ಕನ್ನಡ ಜಿಲ್ಲೆಗಳು) : ಸಾಮಾನ್ಯವಾಗಿ ಅತಿ ಹೆಚ್ಚು ಮಳೆ ಪಡೆಯುವ ಈ ಪ್ರದೇಶಗಳಲ್ಲೂ ಈ ಬಾರಿ ಭತ್ತದ ಬೆಳೆಗೆ ನೀರಿನ ತತ್ವಾರ ಎದುರಾಗಿದೆ. ಹಾಗಾಗಿ, ಇಲ್ಲಿನ ಭತ್ತದ ಗದ್ದೆಗಳಲ್ಲಿ ತೇವಾಂಶ ಇರುವಾಗಲೇ ವಿವಿಧ ತರಕಾರಿಗಳು, ಕಪ್ಪು ಎಳ್ಳು, ಉದ್ದು ಮತ್ತು ಅಲ್ಪಾವಧಿಯ ದ್ವಿದಳ ಧಾನ್ಯಗಳನ್ನು ಬೆಳೆಯುವುದರಿಂದ ಭೂಮಿಯನ್ನು ಖಾಲಿ ಬಿಡದೆ ಆದಾಯ ಗಳಿಸಬಹುದು.

ಬರಗಾಲದಲ್ಲಿ ಸಿರಿಧಾನ್ಯಗಳೇ ರೈತರ ಆಪ್ತ ಮಿತ್ರರು

ಬರಗಾಲವನ್ನು ಮೆಟ್ಟಿ ನಿಲ್ಲುವ ಅದ್ಭುತ ಶಕ್ತಿ ಸಿರಿಧಾನ್ಯಗಳಿಗೆ (ಒಟಟಜಣ) ಇದೆ. ರಾಗಿ, ನವಣೆ, ಸಜ್ಜೆ, ಸಾಮೆ, ಬರಗು ಮತ್ತು ಕೊರಲೆ ಬೆಳೆಗಳಿಗೆ ಅತಿ ಕಡಿಮೆ ನೀರು ಸಾಕು.



### ರೋಗ ನಿರೋಧಕ ಶಕ್ತಿ

ಇವುಗಳಿಗೆ ಕೀಟಬಾಧೆ ತೀರಾ ಕಡಿಮೆ, ಹಾಗಾಗಿ ಕೀಟನಾಶಕಗಳ ವೆಚ್ಚ ಉಳಿಯುತ್ತದೆ.

ಆರೋಗ್ಯ ಹಾಗೂ ಮಾರುಕಟ್ಟೆ ಬೇಡಿಕೆ

ಪ್ರಸ್ತುತ ಮಾರುಕಟ್ಟೆಯಲ್ಲಿ ಸಿರಿಧಾನ್ಯಗಳಿಗೆ ಭಾರಿ ಬೇಡಿಕೆಯಿದ್ದು, ರೈತರಿಗೆ ಉತ್ತಮ ಬೆಲೆ ಸಿಗುತ್ತದೆ.

ಮೇವಿಗೆ ಸಹಕಾರಿ

ಧಾನ್ಯದ ಜೊತೆಗೆ ಜಾನುವಾರುಗಳಿಗೆ ಪೌಷ್ಟಿಕಾಂಶಯುಕ್ತ ಒಣ ಮೇವು ಕೂಡ ಸಿಗುತ್ತದೆ.

ದ್ವಿದಳ ಧಾನ್ಯಗಳು ಮಣ್ಣಿನ ಫಲವತ್ತತೆಗೂ ವರ

ಹೆಸರು, ಉದ್ದು, ಅಲಸಂದಿ ಮತ್ತು ಕಡಲೆಯಂತಹ ದ್ವಿದಳ ಧಾನ್ಯಗಳು ಕೇವಲ 60 ರಿಂದ 75 ದಿನಗಳಲ್ಲಿ ಕಟಾವಿಗೆ ಬರುತ್ತವೆ. ಇವುಗಳ ವಿಶೇಷತೆಯೆಂದರೆ, ಇವು ವಾತಾವರಣದಲ್ಲಿರುವ ಸಾರಜನಕವನ್ನು (ಓಣಡಿಂ-ರಜಟ) ಹೀರಿ ಮಣ್ಣಿನಲ್ಲಿ ಹಿಡಿದಿಟ್ಟುಕೊಳ್ಳುವುದರಿಂದ ಭೂಮಿಯ ಫಲವತ್ತತೆ ಸ್ವಾಭಾವಿಕವಾಗಿ ಹೆಚ್ಚುತ್ತದೆ. ಇದು ಮುಂದಿನ ಹಂಗಾಮಿನ ಬೆಳೆಗೆ ವರವಾಗಲಿದೆ.

### ಕೃಷಿ ತಜ್ಞರ ಪ್ರಮುಖ ಸಲಹೆ

'ಬರಗಾಲದ ಸಮಯದಲ್ಲಿ ಹನಿ ನೀರಾವರಿ (ಆಡಿಠಿ ಖಡಿಡಿರಿಂಚಿಣಠಿ) ಮತ್ತು ತುಂತುರು ನೀರಾವರಿ (ಖಠಿಡಿಟಿಞಟಜಡಿ) ಪದ್ಧತಿಯನ್ನು ಕಡ್ಡಾಯವಾಗಿ ಬಳಸಿ. ಇದು ಶೇಕಡಾ 50 ಕ್ಕಿಂತ ಹೆಚ್ಚು ನೀರನ್ನು ಉಳಿಸುತ್ತದೆ ಮತ್ತು ಗಿಡದ ಬೇರುಗಳಿಗೆ ನೇರವಾಗಿ ತೇವಾಂಶವನ್ನು ತಲುಪಿಸುತ್ತದೆ. ಜೊತೆಗೆ ಮಣ್ಣಿಗೆ ಮಲ್ಚಿಂಗ್ (ಹೊದಿಕೆ) ಮಾಡುವುದರಿಂದ ತೇವಾಂಶ ಆವಿಯಾಗುವುದನ್ನು ತಡೆಯಬಹುದು'.

### ಬದಲಾವಣೆಯೇ ಬದುಕಿನ ದಾರಿ

ಬರಗಾಲ ಎನ್ನುವುದು ಪ್ರಕೃತಿಯ ವಿಕೋಪ ಇರಬಹುದು, ಆದರೆ ಅದಕ್ಕೆ ಶರಣಾಗದೆ ಬುದ್ಧಿವಂತಿಕೆಯಿಂದ ಕೃಷಿ ಮಾಡುವುದು ನಮ್ಮ ಕೈಯಲ್ಲಿದೆ. ಹೆಚ್ಚು ನೀರು ಬೇಡುವ ಸಾಂಪ್ರದಾಯಿಕ ಬೆಳೆಗಳ ವ್ಯಾಮೋಹವನ್ನು ಬಿಟ್ಟು, ಪರಿಸ್ಥಿತಿಗೆ ತಕ್ಕಂತೆ ಪರ್ಯಾಯ ಬೆಳೆಗಳನ್ನು ಅಳವಡಿಸಿಕೊಂಡರೆ ಮಾತ್ರ ಈ ಭೀಕರ ಬರಗಾಲದಲ್ಲೂ ಕೃಷಿಯನ್ನು ಲಾಭದಾಯಕವಾಗಿಸಲು ಸಾಧ್ಯ.

ನಾಡಿನ ರೈತರು ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರಗಳು (ಏಗಿಏ) ನೀಡುವ ಉಚಿತ/ರಿಯಾಯಿತಿ ದರದ ಬೀಜಗಳು ಮತ್ತು ತಾಂತ್ರಿಕ ಸೌಲಭ್ಯಗಳನ್ನು ಬಳಸಿಕೊಂಡು ಪರ್ಯಾಯ ಕೃಷಿಯತ್ತ ಹೆಜ್ಜೆ ಇಡಬೇಕಾಗಿದೆ.

ಕರ್ನಾಟಕದಲ್ಲಿ ಮುಂಗಾರು ಬೆಳೆಗಳ ತುರ್ತು ನಿರ್ವಹಣೆ ಮತ್ತು ಪರ್ಯಾಯ ಬೆಳೆ ಯೋಜನೆ: ರೈತರಿಗೆ ಸಮಗ್ರ ಮಾರ್ಗದರ್ಶಿ

ಹೈದರಾಬಾದನ ಐಸಿಎಆರ್-ಸಿಆರಐಡಿಎ (ಖಅಂಖ-ಅಖಖಆಂ) ಸಂಸ್ಥೆಯು ಕರ್ನಾಟಕದ ಕೃಷಿ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ ಮುಂಗಾರು (ಖರೀಫ್) ಋತುವಿನಲ್ಲಿ ಎದುರಾಗುವ ಮಳೆ ಅಭಾವ ಹಾಗೂ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಸಮಗ್ರ ತುರ್ತು ಬೆಳೆ ಯೋಜನೆಯನ್ನು ರೂಪಿಸಿದೆ.

ಮುಂಗಾರು ಮಳೆಯು ವಿಳಂಬವಾದಾಗ ಅಥವಾ ಋತುವಿನ ವಿವಿಧ ಹಂತಗಳಲ್ಲಿ (ಆರಂಭಿಕ, ಮಧ್ಯಂತರ ಹಾಗೂ ಕೊನೆಯ ಹಂತ) ಮಳೆಯ ಕೊರತೆಯುಂಟಾದಾಗ ರೈತರು ಅನುಸರಿಸಬೇಕಾದ ಪರ್ಯಾಯ ಮಾರ್ಗಸೂಚಿಗಳು: ವಿವಿಧ ಬೆಳೆಗಳ ತುರ್ತು ನಿರ್ವಹಣೆ

### ರಾಗಿ (ಫಿಂಗರ್ ಮಿಲೆಟ್)

ಮಳೆ ವಿಳಂಬವಾದರೆ ಉಕಗ 28, ಉಕಗ 66, ಒಐ 365, ಒಖ 1 ನಂತಹ ತಳಿಗಳನ್ನು ಶೇಕಡಾ 15-20 ರಷ್ಟು ಹೆಚ್ಚಿನ ಬಿತ್ತನೆ ಬೀಜ ಬಳಸಿ ಬಿತ್ತನೆ ಮಾಡಬೇಕು. ಬಿತ್ತನೆಗೆ ಮುನ್ನ 18 ಗಂಟೆ ನೀರಿನಲ್ಲಿ ನೆನೆಸಿ, 24 ಗಂಟೆ ನೆರಳಿನಲ್ಲಿ ಒಣಗಿಸಿ ಬೀಜೋಪಚಾರ (ಖಜಜಜ ಽಚಿಡಿಜಜಟಿಟಿಂ) ಮಾಡುವುದು ಸೂಕ್ತ. ಸಾಲು ತೆಳುಗೊಳಿಸುವುದು (ಖಿಟಿಟಿಟಿಂ) ಕಳೆ ತೆಗೆದು ಮಣ್ಣಿನ ಹೊದಿಕೆ (ಖಠಟ ಟಣಟಛಿ) ಮಾಡುವುದು ಮತ್ತು ಮಳೆ ಬಂದ ತಕ್ಷಣ ಸಾರಜನಕ ಗೊಬ್ಬರ ನೀಡುವುದು ಬೆಳೆಗೆ ಸಹಕಾರಿ.

### ನೆಲಕಡಲೆ (ಕಡಲೆಕಾಯಿ)

ಸಾಧಾರಣವಾಗಿ ಜುಲೈ ಮೊದಲ ವಾರ ಬಿತ್ತನೆಗೆ ಸೂಕ್ತ. ಜುಲೈ ದ್ವಿತೀಯಾರ್ಧದಲ್ಲೂ ಮಳೆಯಾಗದಿದ್ದರೆ ಹರಡುವ ತಳಿಗಳನ್ನು (ಆಖಉ-1, ಖ-230) ಬಳಸಬಹುದು ಅಥವಾ ಸೂರ್ಯಕಾಂತಿಯನ್ನು ಪರ್ಯಾಯ ಬೆಳೆಯಾಗಿ ಆಯ್ಕೆ ಮಾಡಬಹುದು. 30-40 ದಿನಗಳ ಬೆಳೆಗೆ ಮಣ್ಣು ಏರು ಮಾಡುವುದು, ಜಿಪ್ಸಮ್ ಮತ್ತು ಡಿಎಪಿ (2%) ಚಿಂಪಡಣೆ ಮಾಡುವುದು ಹಾಗೂ ತುರ್ತು ನೀರಾವರಿ ನೀಡುವುದು ಅಗತ್ಯ.

### ಮೆಕ್ಕೆಜೋಳ

ಜುಲೈ ಕೊನೆಯಲ್ಲಿ ಸಸಿಗಳ ಸಂಖ್ಯೆ ಕಡಿಮೆಯಿದ್ದರೆ ಮರು ಬಿತ್ತನೆ ಅಥವಾ ಪಾಲಿಥಿನ್ ಚೀಲಗಳಲ್ಲಿ ಬೆಳೆಸಿದ ಸಸಿಗಳನ್ನು ನೆಟ್ಟು ಸಾಲು ತುಂಬಬೇಕು. ಮಣ್ಣಿನಲ್ಲಿ ತೇವಾಂಶವಿದ್ದಾಗ ಮಾತ್ರ ಮೇಲುಗೊಬ್ಬರ ನೀಡಬೇಕು. ನೀರಿನ ಅಭಾವವಿದ್ದಾಗ ಕೆಳಗಿನ ಎಲೆಗಳನ್ನು ತೆಗೆದು ಮೇವಿಗೆ ಬಳಸಬಹುದು.

### ಜೋಳ, ತೊಗರಿ, ಸಜ್ಜೆ ಮತ್ತು ಸೂರ್ಯಕಾಂತಿ

ಮಳೆ ವಿಳಂಬವಾದರೆ ಜೋಳದ ಸಾಲುಗಳ ನಡುವೆ ತೊಗರಿ ಅಥವಾ ಸೂರ್ಯಕಾಂತಿಯನ್ನು ಪರ್ಯಾಯವಾಗಿ ಬಿತ್ತಬಹುದು. ಸಜ್ಜೆಯಲ್ಲಿ ತೇವಾಂಶ ಅಭಾವವಿದ್ದಾಗ ಪ್ರತಿ ಮೂರನೇ ಸಾಲನ್ನು ತೆಗೆದು ಮೇವಿಗಾಗಿ ಬಳಸಬಹುದು. ಸೂರ್ಯಕಾಂತಿಗೆ 2% ಯೂರಿಯಾ ಅಥವಾ ಕೆಸಿಎಲ್ (ಏಅಟ) ಅಥವಾ 5% ಕಾಯೋಲಿನ್ (ಏಚಿಔಟುಟ) ಸಿಂಪಡಿಸುವುದರಿಂದ ಒಣಹವೆ ತಡೆಯಬಹುದು.

ಹೆಸರು ಮತ್ತು ಉದ್ದು

ಜುಲೈ ನಂತರದ ದಿನಗಳಲ್ಲಿ ತೇವಾಂಶದ ಅಭಾವವಿದ್ದರೆ ಕಾಯಿಗಳನ್ನು ತರಕಾರಿ ಉದ್ದೇಶಕ್ಕಾಗಿ ಅಥವಾ ಶಾರೀರಿಕ ಪಕ್ವತೆಯ ಹಂತದಲ್ಲೇ ಕೊಯಿಲು ಮಾಡಿ, ಮುಂದಿನ ರಬಿ ಬೆಳೆಗೆ ಭೂಮಿ ಸಿದ್ಧಪಡಿಸಿಕೊಳ್ಳಬೇಕು.

ಎಳ್ಳು ಮಳೆ ಕೊರತೆಯಿದ್ದರೆ ಗಿಡಗಳ ಸಂಖ್ಯೆ ತೆಳುಗೊಳಿಸಿ, ಸಾಲುಗಳ ನಡುವೆ ಒಣ ಹುಲ್ಲಿನ ಹೊದಿಕೆ (ಒಣಟಛಿ) ಮಾಡಬೇಕು. ಕೊಯ್ಲಿನ ಸಮಯದಲ್ಲಿ ಕಾಳುಗಳು ಉದುರುವುದನ್ನು ತಡೆಯಲು ಸರಿಯಾದ ಹಂತದಲ್ಲಿ ಕೊಯ್ಲು ಮಾಡುವುದು ಮುಖ್ಯ.



ಹತ್ತಿ ಜೂನ್ ದ್ವಿತೀಯಾರ್ಧ ಬಿತ್ತನೆಗೆ ಅತ್ಯಂತ ಸೂಕ್ತ. ಸಸಿಗಳ ಸಂಖ್ಯೆ ಕಡಿಮೆಯಿದ್ದರೆ ಪಾಲಿಥಿನ್ ಚೀಲಗಳಲ್ಲಿ ಬೆಳೆಸಿದ ಸಸಿಗಳನ್ನು ನೆಡಬೇಕು. ಹೂವು ಮತ್ತು ಕಾಯಿ ಕಟ್ಟುವ ಹಂತದಲ್ಲಿ 2% ಆಂಕ + 1% ಒಔಕ ಹಾಗೂ ಮೈಕ್ರೋನ್ಯೂಟ್ರಿಯೆಂಟ್ಸ್ (ಮೆಗ್ನೀಷಿಯಂ, ಝಿಂಕ್, ಬೋರಾನ್) ಸಿಂಪಡಣೆ ಮಾಡುವುದರಿಂದ ಇಳುವರಿ ಕಾಯ್ದುಕೊಳ್ಳಬಹುದು.

ರೈತರು ಕಡ್ಡಾಯವಾಗಿ ಅನುಸರಿಸಬೇಕಾದ ಸಾಗುವಳಿ ಕ್ರಮಗಳು

### ಮಣ್ಣಿನ ತೇವಾಂಶ ಕಾಯ್ದುಕೊಳ್ಳುವಿಕೆ

ಹೊಲದ ಬಂಡ್ ನಿರ್ಮಾಣ (ಈಟಜಟಜ ಛಣಟಜುಟಿ) ಬೋದು ಮತ್ತು ಸಾಲುಗಳ ನಿರ್ಮಾಣ (ಖಜರಫ ಚಟಜ ಜಿಣಡಿಡಿಠಿ), ಪ್ರತಿ 3-4 ಸಾಲುಗಳಿಗೊಮ್ಮೆ ತೇವಾಂಶ ಸಂರಕ್ಷಣಾ ಸಾಲುಗಳನ್ನು ಮಾಡುವುದು ಅತ್ಯಗತ್ಯ.

ಬಿತ್ತನೆಗೆ ಸೂಕ್ತ ಮಳೆ

ಕೆಂಪು ಮಣ್ಣಿನಲ್ಲಿ 50-60 ಮಿ.ಮೀ ಮತ್ತು ಕಪ್ಪು ಮಣ್ಣಿನಲ್ಲಿ 60-75 ಮಿ.ಮೀ ನಷ್ಟು ಉತ್ತಮ ಮಳೆಯಾದ ನಂತರವಷ್ಟೇ ಬಿತ್ತನೆ ಕೈಗೊಳ್ಳಬೇಕು. ತೇವಾಂಶವಿಲ್ಲದೆ ಒಣ ಮಣ್ಣಿನಲ್ಲಿ ಹತ್ತಿ ಮತ್ತು ನೆಲಕಡಲೆ ಬಿತ್ತನೆ ಮಾಡುವುದನ್ನು ಸಂಪೂರ್ಣವಾಗಿ ವರ್ಜಾಯಿಸಬೇಕು.

ಬೆಳೆ ಪರಿವರ್ತನೆ ಮತ್ತು ಮಿಶ್ರ ಬೆಳೆ

ಏಕಬೆಳೆಯ ಬದಲು ಧಾನ್ಯಗಳು, ಬೇಳೆಕಾಳುಗಳು ಮತ್ತು ಎಣ್ಣೆಕಾಳುಗಳ ಮಿಶ್ರಬೆಳೆ (ಖಟಣಜಡಿಛಿಡಿಂಠಿ-ಪಿಟಿಟ) ಪದ್ಧತಿಯನ್ನು ಅಳವಡಿಸಿಕೊಳ್ಳುವುದು ಸೂಕ್ತ.

ಪೋಷಕಾಂಶ ಮತ್ತು ನೀರಿನ ನಿರ್ವಹಣೆ

ಬರ ಪರಿಸ್ಥಿತಿಯಲ್ಲಿ ಶೇಕಡಾ 1 ರಿಂದ 3 ರಷ್ಟು ಯೂರಿಯಾ, 2% ಆಂಕ ಅಥವಾ 19:19:19 ಗೊಬ್ಬರದ ದ್ರಾವಣವನ್ನು ಎಲೆಗಳ ಮೇಲೆ ಸಿಂಪಡಿಸುವುದರಿಂದ ಬೆಳೆ ಚೇತರಿಸಿಕೊಳ್ಳುತ್ತದೆ. ಸಾಧ್ಯವಿದ್ದಲ್ಲಿ ತುಂತುರು (ಖಠಿಡಿಟಿಞಟಜಡಿ) ಅಥವಾ ಹನಿ ನೀರಾವರಿ (ಆಡಿಠಿ) ಮೂಲಕ ಜೀವ ರಕ್ಷಣಾ ನೀರು ನೀಡಬೇಕು.

### ಬೆಳೆ ವಿಮೆ ಮತ್ತು ಹವಾಮಾನ ಮಾಹಿತಿ

ರೈತರು ಕಡ್ಡಾಯವಾಗಿ ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯವನ್ನು ಪಡೆದುಕೊಳ್ಳಬೇಕು ಹಾಗೂ ಸ್ಥಳೀಯ ಕೃಷಿ ಇಲಾಖೆ ನೀಡುವ ಹವಾಮಾನ ಆಧಾರಿತ ಸಲಹೆಗಳನ್ನು ನಿರಂತರವಾಗಿ ಗಮನಿಸಬೇಕು.

### ರೈತರಿಗೆ ಇಲಾಖೆಯ ಮುನ್ನೆಚ್ಚರಿಕೆ ಸಂದೇಶ

ಮುಂಗಾರು ಹಂಗಾಮಿನಲ್ಲಿ ವಾತಾವರಣದ ಅನಿಶ್ಚಿತತೆಯಿಂದ ಬೆಳೆ ನಷ್ಟವಾಗುವುದನ್ನು ತಡೆಗಟ್ಟಲು ಈ ಬೆಳೆ ಯೋಜನೆಯು ಅತ್ಯಂತ ಸಹಕಾರಿಯಾಗಿದೆ. ರೈತರು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಕೃಷಿ ಇಲಾಖಾ ಅಧಿಕಾರಿಗಳನ್ನು ಸಂಪರ್ಕಿಸಿ ಸೂಕ್ತ ತಳಿ ಹಾಗೂ ಪ್ರಮಾಣೀಕೃತ ಬಿತ್ತನೆ ಬೀಜಗಳನ್ನು ಪಡೆದುಕೊಂಡು ಕೃಷಿ ಕೈಗೊಳ್ಳಬಹುದಾಗಿದೆ.

ಲೇಖನ
- ವೈ.ಸಿ.ಸಂಪತ್ ಕುಮಾರ.
ಮುಖ್ಯ ವರದಿಗಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಿಜಯಪುರ

# ಆ.1ರಂದು ವ್ಯಸನ ಮುಕ್ತ ದಿನಾಚರಣೆಗೆ ಸಕಲ ಸಿದ್ಧತೆ :ಡಾ.ಔದ್ರಾಮ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯ ಪ್ರಯುಕ್ತ ವ್ಯಸನಮುಕ್ತ ದಿನಾಚರಣೆಯನ್ನು ಆ. 1 ರಂದು ನಗರದ ಗಾಂಧಿ ವೃತ್ತದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಅಚ್ಚುಕಟ್ಟಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಸಕಲ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ನಡೆಯಲಿರುವ ವ್ಯಸನಮುಕ್ತ ದಿನಾಚರಣೆ ನಿಮಿತ್ತ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಮಾದಕ ವಸ್ತು ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ. ಶಾಲಾ ಕಾಲೇಜಿನ ವಿದ್ಯಾರ್ಥಿಗಳು, ಯುವಜನರಿಗೆ ಹಾಗೂ ಸಾರ್ವಜನಿಕರಿಗೆ ಈ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿ, ಅರ್ಥಪೂರ್ಣ ಕಾರ್ಯಕ್ರಮ ಆಯೋಜಿಸಿ, ಯಶಸ್ವಿಗೊಳಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಮಹಾನಗರ ಪಾಲಿಕೆಯ ಆಯುಕ್ತರಾದ ವಿಜಯ ಮೆಕ್ಕಳಕಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ ಸೇರಿದಂತೆ ಭೀಮರಾಯ ಜಿಗಜಿಣಗಿ, ಸೋಮನಗೌಡ ಕಲ್ಲೂರ, ಎಂ.ಆರ್ ಗುರಿಕಾರ, ಎಂ.ಸಿ ಮುಲ್ಲಾ, ಮಹಾದೇವ ರಾವಜಿ, ಫಯಾಜ ಕಲಾದಗಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಅಧ್ಯಕ್ಷರಾಗಿ ಶಂಕರ ಜಮಾದಾರ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಪಟ್ಟಣದ ಶಂಕರ ಜಮಾದಾರ ಮತಕ್ಷೇತ್ರದ ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟ(–ಎನ್‌ಎಸ್‌ಯುಐ)ದ ಅಧ್ಯಕ್ಷರಾಗಿ ನೇಮಕಗೊಂಡಿದ್ದಾರೆ.

ಎನ್‌ಎಸ್‌ಯುಐ ರಾಜ್ಯಾಧ್ಯಕ್ಷ ಕೀರ್ತಿ ಗಣೇಶ ಎನ್‌ಜಿ ಅವರ ಸಮ್ಮತಿಯೊಂದಿಗೆ ಜಿಲ್ಲಾಧ್ಯಕ್ಷ ಕಿರಣಗೌಡ ಬಿರಾದಾರ ನೇಮಕಗೊಳಿಸಿದ್ದಾರೆ ಎಂದು ವಿಜಯಪುರ ಕಾಂಗ್ರೆಸ್ ಭವನದ ಪ್ರಕಟಣೆ ತಿಳಿಸಿದೆ.

# ಮಾಜಿ ಸೈನಿಕರ ಮಕ್ಕಳಿಗೆ ಜನರಲ್ ಕೆ.ಎಸ್. ತಿಮ್ಮಯ್ಯ ನಗದು ಪ್ರಶಸ್ತಿ: ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2025–26ನೇ ಸಾಲಿನಲ್ಲಿ ನಡೆದ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ಸ್ಟೇಟ್ ಬೋರ್ಡ್, ಸಿ.ಬಿ.ಎಸ್.ಇ, ಐ.ಸಿ.ಎಸ್.ಇ ಪರೀಕ್ಷೆಗಳಲ್ಲಿ ಗರಿಷ್ಠ ಅಂಕ ಗಳಿಸಿದ ಕರ್ನಾಟಕ ಮೂಲದ ಮಾಜಿ ಸೈನಿಕರ ಮಕ್ಕಳಿಗೆ ಜನರಲ್ ಕೆ.ಎಸ್. ತಿಮ್ಮಯ್ಯನಗದು ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಿಂದ ಅರ್ಜಿ ನಮೂನೆ ಪಡೆದುಕೊಂಡು, ಅಗತ್ಯ ದಾಖಲೆಗಳೊಂದಿಗೆ ಡಿಸೆಂಬರ್31 ರೊಳಗಾಗಿ ಮೂರು ಪ್ರತಿಗಳಲ್ಲಿ ಸಲ್ಲಿಸುವುದು.

ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರ ಕಚೇರಿ, ದೂರವಾಣಿ ಸಂಖ್ಯೆ: 08352–250913 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.



# ಸಿಬ್ಬಂದಿ ಸೇವೆ ಸಾರ್ವಜನಿಕರು ನೆನೆದರೆ ಸೇವೆಗೆ ಸಾರ್ಥಕತೆ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಆರೋಗ್ಯ ಇಲಾಖೆಯಲ್ಲಿನ ನಿರತ ನುರಿತ ಸಿಬ್ಬಂದಿಗಳ ಸೇವೆಯನ್ನು ಸಾರ್ವಜನಿಕರು ಸೇರಿದಂತೆ ವಿಶೇಷವಾಗಿ ಗ್ರಾಮೀಣ ಜನತೆ ನೆನೆಯುವಂತಾಗಬೇಕು ಆಗ ಮಾತ್ರ ಸೇವೆಗೆ ಸಾರ್ಥಕತೆ ಎಂದು ಜಿಲ್ಲಾ ಕ್ಷಯರೋಗ ಕಾರ್ಯಾಕ್ರಮಾಧಿಕಾರಿ (ಡಿಟಿಓ) ವೈ.ಎಸ್.ಪಾಟೀಲ ಹೇಳಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ಆವರಣದಲ್ಲಿ ಮಂಗಳವಾರ ಜರುಗಿದ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಇಲಾಖೆಯ ಎಲ್ಲ ಸೇವಾನಿರತ ಸಿಬ್ಬಂದಿಗೆ ಪದನ್ನೋತಿ,ವರ್ಗಾವಣೆಸಾಮಾನ್ಯಇವುಗಳನಡುವೆ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಸೇವೆ ಸಲ್ಲಿಸುವುದು ಎಲ್ಲಕ್ಕಿಂತಲೂ ಮೀಗಿಲಾದುದು ಎಂದರು. ಇದೇ ಸಂದರ್ಭದಲ್ಲಿ ಪದನ್ನೋತಿ ಹಾಗೂ ವರ್ಗಾವಣೆ ಹೊಂದಿದ ವ್ಹಿ.ಜಿ.ಕುಲಕರ್ಣಿ, ಡಿ.ಡಿ.ಪಾಟೀಲ, ಎಸ್.ಬಿ.ಕಲ್ಲೂರ, ಸುಜಾತಾ ದಂಡಿನ, ಜಯಶ್ರೀ ಹುಬ್ಬಳ್ಳಿ ದಂಪತಿಗಳನ್ನು ಸನ್ಮಾನಿಸಲಾಯಿತು.

ಆರೋಗ್ಯ ಕೇಂದ್ರದ(ಸಿಎಚ್‌ಸಿ) ಎಎಮ್‌ಓ ವಿರೇಶ ಹಳ್ಳೂರ ಅಧ್ಯಕ್ಷತೆ ವಹಿಸಿದ್ದರು.

ಡಾ.ಸಂತೋಷ ಯಡಹಳ್ಳಿ, ಡಾ.ದೌಲತ್ರಾಯಗೌಡ ಬಿರಾದಾರ, ಡಾ.ಶ್ವೇತಾ, ಡಾ.ಪ್ರಿಯಾಂಕಾ, ಕಿರಣ ಪಾಟೀಲ, ಎಸ್.ಡಿ.ಕುಲಕರ್ಣಿ, ವಿಜಯ ಹುಬ್ಬಳ್ಳಿ, ಪ್ರಭು ಜಂಗಿನಮಠ, ಮಹಾಲಿಂಗ ಫಕೀರಪುರ, ಎಂ.ಆರ್,ಮಾಶ್ಯಾಳ, ಸುಕನ್ಯಾ ಚಳಗೇರಿ, ಪ್ರೇಮಾ ಬಡಿಗೇರ, ರಶ್ಮೀ ಗುತ್ತೇದಾರ, ಲಕ್ಷ್ಮೀಕಾಂತ, ವಿಶಾಲ ಬಾಗಲೆ, ನಿಂಗರಾಜ, ಮೈಬೂಬ ಗಿರಣಿ ಶಫೀಕ, ರಮೇಶ ಹಾಗೂ ಅಂಗನವಾಡಿ, ಆಶಾ ಕಾರ್ಯಕರ್ತೆಯರು ಹಾಗೂ ಸಿಬ್ಬಂದಿ ಇದ್ದರು.



# ಅಂಧಶ್ರದ್ಧೆ, ಅಸಮಾನತೆ ಖಂಡಿಸಿದ್ದ ಹಡಪದ ಅಪ್ಪಣ್ಣ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಶಿವಶರಣ ಹಡಪದ ಅಪ್ಪಣ್ಣನವರು ಕಾಯಕವೇ ಕೈಲಾಸ ಎಂಬ ಸಂದೇಶವನ್ನು ತಮ್ಮ ಜೀವನದಲ್ಲಿ ಅಕ್ಷರಶಃ ಅನುಸರಿಸಿದ್ದರು. ಕ್ಷೌರ ವೃತ್ತಿಯನ್ನು ಅತ್ಯಂತ ನಿಷ್ಠೆಯಿಂದ ನಿರ್ವಹಿಸುತ್ತಾ ಪ್ರತಿಯೊಂದು ಕಾಯಕವು ಪವಿತ್ರ ಎಂಬ ಸಂದೇಶವನ್ನು ಸಾರಿದರು ಎಂದು ತಹಶೀಲ್ದಾರ ಸಂತೋಷ ಮ್ಯಾಗೇರಿ ಹೇಳಿದರು. ಪಟ್ಟಣದ ತಹಶೀಲ್ದಾರ ಕಚೇರಿಯಲ್ಲಿ ತಾಲೂಕು ಆಡಳಿತದ ವತಿಯಿಂದ ಬುಧವಾರ ಶಿವಶರಣ ಹಡಪದ ಅಪ್ಪಣ್ಣನವರ 892ನೇ ಜಯಂತಿ ಕಾರ್ಯಕ್ರಮವನ್ನು ತಹಶೀಲ್ದಾರ ಅವರು ಉದ್ಘಾಟಿಸಿ ಹಡಪದ ಅಪ್ಪಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಮಸಬಿನಾಳ ಗ್ರಾಮದಲ್ಲಿ ಜನಿಸಿದ ಅಪ್ಪಣ್ಣನವರು ತಮ್ಮ ವಚನಗಳ ಮೂಲಕ ಸಮಾಜದಲ್ಲಿದ್ದ ಅಂಧಶ್ರದ್ಧೆ, ಅಸಮಾನತೆ ಹಾಗೂ ಅಜ್ಞಾನವನ್ನು ಖಂಡಿಸಿದರು. "ಬಸವಪ್ರಿಯ ಕೂಡಲಚನ್ನಸಂಗಮದೇವ" ಎಂಬ ಅಂಕಿತನಾಮದಿಂದ ಅವರು ಅನೇಕ ಅರ್ಥಪೂರ್ಣ ವಚನಗಳನ್ನು ರಚಿಸಿದ್ದಾರೆ. ಅವರ ಜೀವನ ಎಲ್ಲರಿಗೂ ಪ್ರೇರಣೆಯಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪ ತಹಶೀಲ್ದಾರ್ ಎನ್.ಕೆ. ನದಾಫ್, ಗ್ರಾಮ ಆಡಳಿತಾಧಿಕಾರಿ ಬಿ.ಎನ್. ಜಿಡ್ಡಿಮನಿ, ಆನಂದ ಇಂಡಿ ಉಪಸ್ಥಿತರಿದ್ದರು.

ಸಮಾಜದ ಮುಖಂಡರಾದ ಲಕ್ಷ್ಮಣ ಸು. ಹಡಪದ, ಮಲ್ಲಪ್ಪ ಹಡಪದ, ಯಲ್ಲಪ್ಪ ಹಡಪದ, ಮಂಜು ಹಡಪದ, ಅರ್ಜುನ್ ಹಡಪದ, ಕಾಂತು ಹಡಪದ (ಪತ್ರಕರ್ತರು), ಬಸವ ಹಡಪದ, ಪುಂಡಲೀಕ ಹಡಪದ, ಭೀಮಸಿ ಹಡಪದ, ಈರಪ್ಪ ಹಡಪದ, ಕಲಮೇಶ ಹಡಪದ, ಹಂಪಣ್ಣ ಹಡಪದ, ಪರಶುರಾಮ ಹಡಪದ, ಹಣಮಂತ ಹಡಪದ, ಶಿವು ಹಡಪದ, ಇಸು ಹಡಪದ ಹಾಗೂ ನಾಗಪ್ಪ ಹಡಪದ ಸೇರಿದಂತೆ ಹಲವರು ಭಾಗವಹಿಸಿದ್ದರು.

# ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ಶಿಲಾಧರ ಎನ್. ಜಾಧವ ಹೇಳಿಕೆ

# ಉತ್ತಮ ವ್ಯಕ್ತಿತ್ವ, ಮಾನವೀಯತೆ, ಶಿಸ್ತು ಶಿಕ್ಷಣದ ಮುಖ್ಯ ಉದ್ದೇಶ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಶಿಕ್ಷಣವೆಂದರೆ ಕೇವಲ ಅಂಕಗಳನ್ನು ಗಳಿಸುವುದಲ್ಲ. ಉತ್ತಮ ವ್ಯಕ್ತಿತ್ವ, ಮಾನವೀಯತೆ, ಶಿಸ್ತು ಹಾಗೂ ಸಮಾಜದ ಬಗ್ಗೆ ಕಾಳಜಿ ಬೆಳೆಸಿಕೊಳ್ಳುವುದೂ ಶಿಕ್ಷಣದ ಮುಖ್ಯ ಉದ್ದೇಶವಾಗಿದೆ ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ಶಿಲಾಧರ ಎನ್. ಜಾಧವ ಹೇಳಿದರು.

ಸಿಂದಗಿ ನಗರದ ಆರ್.ಡಿ. ಪಾಟೀಲ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಪಠ್ಯಪೂರಕ ಚಟುವಟಿಕೆಗಳು, ರೋವರ್ ಮತ್ತು ರೇಂಜರ್, ಭಾರತ ಸೇವಾದಳ ಹಾಗೂ ಎನ್.ಎಸ್.ಎಸ್. ಘಟಕಗಳ ಉದ್ಘಾಟನೆ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದ ಅವರು, ಮಹಾವಿದ್ಯಾಲಯವು ಪ್ರತಿವರ್ಷ ಉತ್ತಮ ಫಲಿತಾಂಶ ನೀಡುತ್ತಿದ್ದು, ಶಿಸ್ತು, ಸಂಸ್ಕಾರ ಮತ್ತು ಗುಣಮಟ್ಟದ ಶಿಕ್ಷಣಕ್ಕಾಗಿ ಹೆಸರುವಾಸಿಯಾಗಿದೆ. ಇಲ್ಲಿನ ವಿದ್ಯಾರ್ಥಿಗಳು ರಾಜ್ಯ ಹಾಗೂ ದೇಶದ ವಿವಿಧ ಕ್ಷೇತ್ರಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಂಸ್ಥೆಗೆ ಕೀರ್ತಿ ತಂದಿದ್ದಾರೆ ಎಂದು ಹೇಳಿದರು.

ಈ ವೇಳೆ ವಿಜಯಪುರದ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಧ್ಯಾಪಕ ಹಾಗೂ ನರರೋಗ ತಜ್ಞ ಡಾ.ವಿರುಪಾಕ್ಷಪ್ಪ ಬಿರಾದಾರ ಮಾತನಾಡಿದರು.

ಇದೇ ಸಂದರ್ಭದಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಸಮಾರಂಭದಲ್ಲಿ ಸಾರಂಗಮಠದ ಡಾ. ಪ್ರಭುಸಾರಂಗದೇವ ಶಿವಾಚಾರ್ಯರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು. ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಎಂ.ಸಿಂಗನಳ್ಳಿ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಪಿ.ವಿ.ಮಹಲಿನಮಠ, ಎಸ್. ಎಸ್.ಜಾಧವ, ಡಾ.ಶರಣಬಸವ ಜೋಗೂರ, ಬಿ.ಬಿ. ಜಮಾದಾರ, ಶಿವಶರಣ ಬೂದಿಹಾಳ, ಡಾ.ವಿ.ಪಿ. ನಂದಿಕೋಲ, ಎನ್.ಬಿ. ಪೂಜಾರಿ, ವಿ.ಕೆ.ಹಿರೇಮಠ, ಎಂ.ಐ. ಮುಜಾವರ, ಸಂಗಮೇಶ ಮಾರ್ಸನಳ್ಳಿ, ಶಿವರಾಜ ಕುಂದಗೋಳ, ಪ್ರಸನ್ನ ಜೋಗೂರ ಸೇ–ರಿದಂತೆ ಭೋದಕ ಭೋದಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು. ಚರ್ಚಾಕೂಟ ವಿಭಾಗದ ಕಾರ್ಯಾಧ್ಯಕ್ಷ ಜೆ.ಎಂ.ಗಾಣಗೇರ ಸ್ವಾಗತಿಸಿ ಪರಿಚಯಿಸಿದರು. ರಾಹುಲ ನಾರಾಯಣಕರ, ಸ್ನೇಹಾ ಪಾಟೀಲ ಹಾಗೂ ನಿಖಿತಾ ಹಿರೇಮಠ ನಿರೂಪಿಸಿದರು. ನಾಜ್ಮಾ ಮೇಲಿನಮನಿ ವಂದಿಸಿದರು.

## ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಮಾಹಿತಿ

# ಡಿ.ಎನ್. ಸಲ್ಯೂಷನ್ಸ್: 400 ಎಂಜಿನಿಯರ್ ಗಳಿಗೆ ಉದ್ಯೋಗ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಾಗತಿಕ ಮಟ್ಟದ ಕೈಗಾರಿಕೆ ದೈತ್ಯ ಡಿ.ಎನ್. ಸಲ್ಯೂಷನ್ಸ್ ರಾಜ್ಯದಲ್ಲಿ ಆಗಸ್ಟ್ 26ರಿಂದ ಕಾರ್ಯಾರಂಭ ಮಾಡುತ್ತಿದ್ದು, ಮೊದಲ ಹಂತದಲ್ಲಿ 400 ಎಂಜಿನಿಯರ್ ಗಳಿಗೆ ಉದ್ಯೋಗ ನೀಡಲಿದೆ. ಇದರಲ್ಲಿ ವಿಜಯಪುರ ನಗರದ ಬಿ.ಎಲ್.ಡಿ.ಇ ಎಂಜಿನಿಯ–ರಿಂಗ್ ಕಾಲೇಜಿನ 8 ಮತ್ತು ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಸಂಗನಬಸವ ಮಹಾಸ್ವಾಮೀಜಿ ಪಾಲಿಟೆಕ್ನಿಕ್ ಕಾಲೇಜಿನ 12 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 20 ವಿದ್ಯಾರ್ಥಿಗಳು ಉದ್ಯೋಗ ಪಡೆದುಕೊಂಡಿದ್ದಾರೆ ಎಂದು ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಈ ಕಂಪನಿಯಲ್ಲಿ ಉದ್ಯೋಗ ಪಡೆಯುವುದು ಹೆಮ್ಮೆಯ ವಿಷಯವಾಗಿದೆ. ಈಗ ಉದ್ಯೋಗ ಪಡೆದ ಒಟ್ಟು 400 ಯುವಕರಲ್ಲಿ ಉತ್ತರ ಕರ್ನಾಟಕದ 117 ಜನರಿಗೆ ಅವಕಾಶ ಸಿಕ್ಕಿರುವುದು ಸಂತಸ ತಂದಿದೆ ಎಂದು ಅವರು ತಿಳಿಸಿದ್ದಾರೆ.

ದಕ್ಷಿಣ ಕೊರಿಯಾದ ನಂ.1 ಮತ್ತು ವಿಶ್ವದ 3ನೇ ಅತಿ–ದೊಡ್ಡ ಮೆಟಲ್–ಕಟಿಂಗ್ ಮೆಷಿನ್ ತಯಾರಿಕಾ ಸಂಸ್ಥೆ ಇದಾಗಿದೆ. ಈ ವರ್ಷದ ಫೆಬ್ರವರಿಯಿಂದ ಕರ್ನಾಟಕದಲ್ಲಿ ತನ್ನ ಮಹತ್ವಾಕಾಂಕ್ಷಿ ಉತ್ಪಾದನೆ ಘಟಕದ ನಿರ್ಮಾಣ ಕಾರ್ಯವನ್ನು ಆರಂಭಿಸಿದ್ದು ಆಗಸ್ಟ್ 26ಕ್ಕೆ ಉದ್ಘಾಟನೆ ನಡೆಯಲಿದೆ.

ದೇವನಹಳ್ಳಿಯ ಐಟಿಐಆರ್ ಸಮೀಪ ಸುಮಾರು □1,000 ಕೋಟಿ ಹೂಡಿಕೆಯೊಂದಿಗೆ ನಿರ್ಮಾಣವಾಗುತ್ತಿರುವ ಈ ಘಟಕಕ್ಕೆ 10 ಎಕರೆ ಜಮೀನು ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.

ರಾಜ್ಯ ಸರಕಾರಕ್ಕೆ ಬಂದ ಹೂಡಿಕೆಗಳು ಕಾಗದಗಳ ಮೇಲೆ ಉಳಿಯದೆ, ಅನುಷ್ಠಾನಗೊಳ್ಳುತ್ತ ಉದ್ಯೋಗಗಳನ್ನು ಸೃಷ್ಟಿಸಿ ನಮ್ಮ ಯುವ ಸಮೂಹದ ಭವಿಷ್ಯವನ್ನು ರೂಪಿಸುತ್ತಿವೆ ಎಂದು ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ. ಈ ಮಧ್ಯೆ ಡಿ.ಎನ್. ಸಲ್ಯೂಷನ್ಸ್‌ನ ಭಾರತ ಮಾರಾಟ ಮತ್ತು ಮಾರುಕಟ್ಟೆ ವಿಭಾಗದ ಮುಖ್ಯಸ್ಥ ಯಂಗ್ನಾಮ್ ಕಿಮ್ ಮತ್ತು ಅವರ ತಂಡದ ಸದಸ್ಯರು ಬೆಂಗಳೂರಿನಲ್ಲಿ ಸಚಿವರನ್ನು ಭೇಟಿ ಮಾಡಿ ಆಗಷ್ಟ್ 26ರಂದು ನಡೆಯಲಿರುವ ಘಟಕದ ನಿರ್ಮಾಣ ಕಾರ್ಯಕ್ರಮಕ್ಕೆ ಆಹ್ವಾನ ನೀಡಿದರು.

# ಒತ್ತಡದ ಜೀವನಕ್ಕೆ ಸಂಗೀತವೇ ಔಷಧಿ :ಕೂಚಬಾಳ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ನಮ್ಮೊಳಗಿನ ಚಿಂತೆ, ಆಯಾಸ, ದುಃಖ ದುಮ್ಮಾನುಗಳಿಗೆ ಹಾಗೂ ಒತ್ತಡ ಜೀವನಕ್ಕೆ ಸಂಗೀತವೇ ಉತ್ತಮ ಔಷಧಿಯಾಗಿದೆ ಎಂದು ಕನ್ನಡ ಸಾಹಿತ್ಯ ಗೆಳೆಯರ ಬಳಗದ ಅಧ್ಯಕ್ಷ ರಾಜಶೇಖರ ಕೂಚಬಾಳ ಹೇಳಿದರು.

ಪಟ್ಟಣದ ಬಸವ ಮಂಟಪದಲ್ಲಿ ಶ್ರೀ ರೇ.ಚ ರೇವಡಿಗಾರ (ರಿ) ಪ್ರತಿಷ್ಠಾನ ಹಮ್ಮಿಕೊಂಡ ಗುರು ಸ್ಮರಣೆ, ಭಕ್ತಿ ಸಂಗೀತ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಂಗೀತ ಮನಸ್ಸಿನ ಭಾರ ತಗ್ಗಿಸಿ, ನೆಮ್ಮದಿ ಮತ್ತು ಆರೋಗ್ಯಕರ ಜೀವನ ನಡೆಸಲು ಶಕ್ತಿಯ ಸಂಕೇತವಾಗಿದೆ ಎಂದರು.

ಪ್ರತಿಷ್ಠಾನದ ರಂಗನಾಥ್ ಥೋರ್ಪೆ ಮಾತನಾಡಿ, ಸಂಗೀತದಿಂದ ಜಗತ್ತನ್ನೆ ಬದಲಿಸಬಹುದು, ಸಂಗೀತ ಎಲ್ಲರನ್ನೂ ಒಂದುಗೂಡಿಸುವ ಕಲಾ ಸಂಪತ್ತು ಹೀಗಾಗಿ ಇಂದು ಹಿರಿಯ ಸಂಗೀತ ರತ್ನತ್ರೇಯರು, ಕಿರಿಯ ಪ್ರತಿಭಾನ್ವಿತ ಸಂಗೀತ ಯುವ ಕಲಾವಿದರ ಸಮ್ಮಿಲನವಾಗಲು ಸಾಧ್ಯವಾಗಿದೆ ಎಂದು ಪ್ರಾಸ್ತಾವಿಕ ಮಾತನಾಡಿದರು.

ಆರಕ್ಷಕ ಮೌಲಾಲಿ ಆಲಗೂರ ಮಾತನಾಡಿ, ಎಲೆಮರೆಯಾಗಿ ಉಳಿದ ಸಂಗೀತ ದಿಗ್ಗಜರನ್ನು ಹಾಗೂ ಯುವ ಕಲಾವಿದರನ್ನು ಒಟ್ಟಿಗೆ ಒಂದೇ ವೇದಿಕೆ ನೀಡಿರುವುದು ಶ್ಲಾಘನೀಯ ಎಂದರು.

ಇದೇ ವೇಳೆ ಹಿರಿಯ ಗಾಯಕರಾದ ರಾಜು ತಿವಾರಿ, ಮೌನಪ್ಪ ಪತ್ತಾರ, ಮುದ್ದುರಾಜ ಅಲ್ದಿ ತಮ್ಮ ಸುಮಧುರ ಕಂಠದಿಂದ ಸುಶ್ರಾವ್ಯವಾಗಿ ಹಾಡಿ ಚಪ್ಪಾಳೆ

ಗಿಟ್ಟಿಸಿಕೊಂಡರೆ, ಉದಯೋನ್ಮುಖ ಗಾಯಕಿಂ–ಮರಾದ ಪೂಜಾ ಹಿರೇಮಠ, ಭಾಗ್ಯ ಬಬಲೇಶ್ವರ, ರಾಜೇಶ್ವರಿ ತಮ್ಮ ಅತ್ಯದ್ಭುತ ಗಾಯನವನ್ನು ಪ್ರಸುತ್ತ ಪಡಿಸಿದರು.

ದಯಾನಂದ ಪತ್ತಾರ ಹಾಗೂ ವಿನಾಯಕ ಕುಲ್ಕರ್ಣಿ ತಬಲಾ ಸಾತ ನೀಡಿದರು. ಶ್ರೀ ರೇ.ಚ ರೇವಡಿಗಾರ ಪ್ರತಿಷ್ಠಾನ ವತಿಯಿಂದ ರಾಜು ತಿವಾರಿ, ಮೌನಪ್ಪ ಪತ್ತಾರ, ಮುತ್ತುರಾಜ್ ಅಲ್ದಿ ಇವರಿಗೆ ಸಿಂದಗಿಯ ಸಂಗೀತ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಅದೇ ಸಮಯದಲ್ಲಿ ಆರಕ್ಷಕ ಮೌಲಾಲಿ ಆಲಗೂರ ರಾಜು ತಿವಾರಿ ಹಾಡುತ್ತಿದ್ದ ಹಾಡನ್ನು ವಾಟ್ಸ್ ಆಪ್ ಸ್ಟೇಟಸ್ ಹಾಕಿದ್ದನ್ನು ತಕ್ಷಣವೇ ಗಮನಿಸಿದ ಕತಾರ ದೇಶದಲ್ಲಿ ನೆಲೆಸಿರುವ ಮಾಡಬಾಳ ಗ್ರಾಮದ ಅನಿಲ್ ಬೋಸಗಿ (ಕರ್ನಾಟಕ ಸಂಘದ ಅಧ್ಯಕ) ಕರೆ ಮಾಡಿ ಐದು ಸಾವಿರ ಫೋನ್ ಪೇ ಮೂಲಕ ರಾಜು ತಿವಾರಿ ಇವರಿಗೆ ತಲುಪಿಸಿದರು. ಇನ್ನೂ ರಾಜಶೇಖರ ಕೂಚಬಾಳ ಎಲ್ಲ ಕಲಾವಿದರಿಗೂ ಒಂದು ಸಾವಿರದಂತೆ ಹಾಗೂ ಕಾರ್ಯಕ್ರಮ ಆಯೋಜನೆ ಮಾಡಿದ ಪ್ರತಿಷ್ಠಾನಕ್ಕೆ ಐದು ಸಾವಿರ ನಗದು ಗೌರವಿತವಾಗಿ ನೀಡಿದರು. ಸಂಸ್ಥೆ ಕಾರ್ಯದರ್ಶಿ ಆನಂದ ಶಾಬಾದಿ, ಸಿದ್ಧಲಿಂಗ ಚೌಧರಿ, ಪಂಡಿತ ಯಂಪೂರೆ, ಮಹಾಂತೇಶ ನೂಲನವರ, ಗುರುನಾಥ ಅರಳಗುಂಡಗಿ, ಮೌಲಾಲಿ ಆಲಗೂರ, ಸೇರಿದಂತೆ ಇತರರು ಸಂಗೀತಕ್ಕೆ ಕಿವಿಯಾದರು.

# ಗುರುವಿಗೆ ಕೃತಜ್ಞತೆ ಸಲ್ಲಿಸುವ ಪವಿತ್ರ ದಿನ ಗುರು ಪೂರ್ಣಿಮೆ :ಜೋಗೂರ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಪಟ್ಟಣದ ವಿಶ್ವೇಶ್ವರ ಬಾಲಭಾರತಿ ಪ್ರಾಥ–ಮಿಕ ಶಾಲೆಯಲ್ಲಿ ಗುರು ಪೂರ್ಣಿಮೆ ಹಾಗೂ ದಿ.ಶಿವಕಾಂತ ಬಡದಾಳ ರವರ ಪುಣ್ಯ ಸ್ಮರಣೆ ಕಾರ್ಯಕ್ರಮ ಆಚ–ರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ಶ್ರೀಶೈಲಪ್ಪ ಜೋಗೂರ, ಪುರಾಣ ಕಾಲದಿಂದಲೂ ಗುರು ಸ್ಮರಣೆ ಬೆಳೆದುಕೊಂಡು ಬಂದಿದ್ದು, ಇಂದು ಪ್ರತಿ ವ್ಯಕ್ತಿಯ ಜೀವನದಲ್ಲಿ ಒಂದಿಲ್ಲೊಂದು ರೀತಿಯಲ್ಲಿ ಬಹಳಷ್ಟು ಜನರಿಂದ ಶಿಕ್ಷಣ ಹಾಗೂ ಮಾರ್ಗದರ್ಶನ ಪಡೆದಿರುತ್ತೇವೆ. ಅಂತಹ ಗುರುಗಳಿಗೆ ಸ್ಮರಣೆ ಮಾಡಿ ಅವರಿಗೆ ಕೃತಜ್ಞತೆ ಸಲ್ಲಿಸುವುದು ಪ್ರತಿಯೊಬ್ಬರ ಕರ್ತವ್ಯ ಇದುವೇ ಗುರು ಪೂರ್ಣಿಮೆಯ ಆಚರಣೆಯ ಉದ್ದೇಶ.

ಮುಖ್ಯ ಶಿಕ್ಷಕ ಲಕ್ಷ್ಮೀಪುತ್ರ ಕಿರನಳ್ಳಿ ಮಾತನಾಡಿ, ಗುರು ಪೂರ್ಣಿಮೆಯು ಅಜ್ಞಾನದ ಕತ್ತಲೆಯನ್ನು ಹೋಗಲಾಡಿಸಿ ಜ್ಞಾನದ ಬೆಳಕು ನೀಡುವ ಗುರುಗಳಿಗೆ ಕೃತಜ್ಞತೆ ಸಲ್ಲಿಸುವ ಪವಿತ್ರ ದಿನವಾಗಿದೆ. ಆಷಾಢ ಮಾಸದ ಹುಣ್ಣಿಮೆಯಂದು ಬರುವ ಈ ಹಬ್ಬವು ಮಹರ್ಷಿ ವೇದವ್ಯಾಸರ ಜನ್ಮದಿನ ಹಾಗೂ ಆದಿಯೋಗಿಯಾದ ಶಿವನು ಮೊದಲ ಗುರುವಾಗಿ ಜ್ಞಾನ ಬೋಧನೆ ಆರಂಭಿಸಿದ ದಿನವೆಂದು ನಂಬಲಾಗಿದೆ. ಇಂದು ಸಂಸ್ಥೆಯ ಅಧ್ಯಕ್ಷರು ಎಸ್.ಆಯ. ಜೋಗೂರ ರವರು ಪ್ರತಿನಿತ್ಯ ಎಲ್ಲಾ ಶಿಕ್ಷಕ ರಿಗೂ ಹಾಗೂ ವಿದ್ಯಾರ್ಥಿಗಳಿಗೂ ಹಲವು ತರಹದ ಜ್ಞಾನ ತಮ್ಮ ಅನುಭವ ಹಾಗೂ ಸಂಶೋಧನಾ ಮೂಲಕ ಶಾಲೆಯ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವ ಮೂಲಕ ಗುರುವಿನ ಸ್ಥಾನಕ್ಕೆ ಘನತೆ ತಂದಿದ್ದಾರೆ ಹಾಗಾಗಿ ಅವರ ಸೇವೆಯನ್ನು ಶ್ಲಾಘಿಸಿ ಅವರನ್ನು ಗೌರವಿಸಲಾಗಿದೆ. ಇದೆ ವೇಳೆ ಸಿಂದಗಿ ತಾಲ್ಲೂಕಿನ ದೈಹಿಕ ಶಿಕ್ಷಣದ ಶಿಕ್ಷಕರ ಸಂಘದ ಉಪಾಧ್ಯಕ್ಷರಾಗಿ ಆಯ್ಕೆ ಆದ ಶಾಲೆಯ ದೈಹಿಕ ಶಿಕ್ಷಕಿ ಸೀತಾ ಆರೇಶಂಕರ ರವನ್ನು ಗೌರವಿಸಲಾಯಿತು.

ಈ ವೇಳೆ ಶಿಕ್ಷಕರಾದ ಚಂದ್ರಕಾಂತ ದೇವರಮನಿ, ಲಕ್ಷ್ಮೀಬಾಯಿ ಹಳೇಮನಿ, ಸುವರ್ಣ ಸಾರಂಗಮಠ, ಸರುಬಾಯಿ ಬಂಡಗರ, ಸುನೀತಾ ಗುಂಡದ,ಪ್ರಶಾಂತ ಗಡದೆ, ಐಶ್ವರ್ಯ ಬೇಪಾರಿ, ಅಂಜಲಿ ಕನ್ನೊಳ್ಳಿ ಮುಂತಾದವರು ಉಪಸ್ಥಿತರಿದ್ದರು



**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR